ಕನ್ನಡ ದಿನಪತ್ರಿಕೆ
22 ಫೆಬ್ರುವರಿ । ಗುರುವಾರ
22 February 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 05 ಪುಟ – 4 RNI . KARKAN/2020/79084 ADVRT EMAIL. BELAGAVIVARADIEDITOR@GMAIL.COM NEWSBELAGAVI@GMAIL.COM 9900332089 REG.NO G-2/PMG/KA/NK/BM/139/2024-26

ಶಿಕ್ಷಕರ ಕ್ಷೇತ್ರದ ಗೆಲುವು ಲೋಕಸಭೆಗೆ ದಿಕ್ಸೂಚಿ: ಸಿದ್ದರಾಮಯ್ಯ

ಬೆಂಗಳೂರು: ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆದ್ದಿರುವುದು ಮುಂಬರುವ ಲೋಕಸಭೆ ಚುನಾವಣೆಗೂ ಇದು ದಿಕ್ಸೂಚಿಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ವಿಧಾನ ಪರಿಷತ್ನಲ್ಲಿ ರಾಜ್ಯಪಾಲರ ಭಾಷಣಕ್ಕೆ ಉತ್ತರ ನೀಡಿದ ಅವರು, ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ ಗೆದ್ದಿರುವುದು ಕರ್ನಾಟಕದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಯನ್ನು ಜನ ಸಾರಾಸಗಾಟಾಗಿ ತಿರಸ್ಕಾರ ಮಾಡಿದ್ದಾರೆ. ಇದು ಮುಂಬರುವ ಲೋಕಸಭೆ ಚುನಾವಣೆಗೂ ದಿಕ್ಸೂಚಿಯಾಗಲಿದೆ ಎಂದು ಹೇಳಿದರು.

ನೀವು ಏನೇ ಮೈತ್ರಿ ಮಾಡಿಕೊಂಡರೂ ಕರ್ನಾಟಕದ ಜನ ನಿಮ್ಮನ್ನು ಒಪ್ಪುವುದಿಲ್ಲ ಎಂಬುದು ಫಲಿತಾಂಶದಿಂದಲೆ ಸಾಬೀತಾಗಿದೆ. ಲೋಕಸಭೆ ಚುನಾವಣೆಯಲ್ಲಿ ನಾವು ನಿಮ್ಮ ಮೈತ್ರಿಯನ್ನು ಮಣಿಸಿ ಹೆಚ್ಚಿನ ಸ್ಥಾನವನ್ನು ಗೆಲ್ಲಲಿದ್ದೇವೆ. ಕರ್ನಾಟಕ ಜನ ಎಂದಿಗೂ ಕೋಮುವಾದವನ್ನು ಒಪ್ಪುವುದಿಲ್ಲ ಎಂದು ಜೆಡಿಎಸ್–ಬಿಜೆಪಿ ಮೈತ್ರಿ ವಿರುದ್ಧ ವಾಗ್ದಾಳಿ ನಡೆಸಿದರು. ಪುಟ್ಟಣ್ಣನವರ ಫಲಿತಾಂಶ ನಿಮಗೆ ಎಚ್ಚರಿಕೆಯ ಗಂಟೆ. ನೀವಿಬ್ಬರೂ ಮೈತ್ರಿಯಾದರೂ ಶಿಕ್ಷಕರ ಕ್ಷೇತ್ರದಲ್ಲಿ ಸೋಲು ಅನುಭವಿಸಲಿದ್ದೀರಿ. ಮುಂದಿನ ಚುನಾವಣೆಗಳಿಗೂ ಇದು ಮಾರ್ಗಸೂಚಿಯಾಗಲಿದೆ ಎಂದು ಎಚ್ಚರಿಸಿದರು.

ಬಿಜೆಪಿಯ ರವಿಕುಮಾರ್ ಮಾತನಾಡಿ, ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸ್ಗಢ ಸೇರಿದಂತೆ ಅನೇಕ ಕಡೆ ಕಾಂಗ್ರೆಸ್ ಸೋತಿದೆ. ಅಲ್ಲಿ ಬಿಜೆಪಿ ಗೆದ್ದು ಅಧಿಕಾರಕ್ಕೆ ಬಂದಿದೆ. ಹಾಗಾದರೆ ಇದು ಯಾವ ಮುನ್ಸೂಚನೆಯನ್ನು ನೀಡುತ್ತದೆ ಎಂದು ಪ್ರಶ್ನೆ ಮಾಡಿದರು. ಇದಕ್ಕೆ ತಿರುಗೇಟು ನೀಡಿದ ಸಿಎಂ, ನೀವು ಕರ್ನಾಟಕದ ಬಗ್ಗೆ ಮಾತನಾಡಿ, ಅಲ್ಲಿನ ರಾಜ್ಯಗಳ ಫಲಿತಾಂಶದ ಬಗ್ಗೆ ಮಾತನಾಡುವುದು ಬೇಡ. ಮೊದಲು ಕರ್ನಾಟಕದ ಬಗ್ಗೆ ಮಾತನಾಡಿ. ಮುಂದಿನ ಲೋಕಸಭೆ ಚುನಾವಣೆಯಲ್ಲಿ 28 ಲೋಕಸಭಾ ಕ್ಷೇತ್ರಗಳ ಪೈಕಿ 20 ಸ್ಥಾನಗಳನ್ನು ಗೆಲ್ಲಲಿದ್ದೇವೆ ಎಂದು ಹೇಳಿದರು.

ಪುಟ್ಟಣ್ಣ 1500 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಬಿಜೆಪಿ ಜೆಡಿಎಸ್ ಮೈತ್ರಿಗೆ ಸೋಲಾಗಿದೆ. ನಾವು ನಿಮ್ಮ ಹಾಗೆ ಸುಳ್ಳು ಹೇಳುವುದಿಲ್ಲ. 28ರ ಪೈಕಿ 20 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದರು. ಆಗ ಪ್ರತಿಪಕ್ಷದ ನಾಯಕ ಕೋಟಾ ಶ್ರೀನಿವಾಸ ಪೂಜಾರಿ ಅವರದು ವೈಯಕ್ತಿಕ ಗೆಲುವು. ಈ ಫಲಿತಾಂಶ ಲೋಕಸಭೆ ಚುನಾವಣೆ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಇದು ಸ್ಥಳೀಯ ವಿಷಯಗಳ ಮೇಲೆ ನಡೆದಿರುತ್ತದೆ. ನಾವು 28ರಲ್ಲಿ 28 ಕ್ಷೇತ್ರಗಳನ್ನೂ ಗೆಲ್ಲುತ್ತೇವೆ ಎಂದು ಆತ್ಮವಿಶ್ವಾಸದಿಂದ ನುಡಿದರು.

ಇದಕ್ಕೆ ಸಿದ್ದರಾಮಯ್ಯನವರು, ಓಯ್ ಸುಮ್ಮನೆ ಕುತ್ಕೊಳಪ್ಪ, ನೀನು ದಕ್ಷಿಣಕನ್ನಡ ಕ್ಷೇತ್ರದಲ್ಲಿ ನಿಂತ್ಕೋ ಯಾರು ಗೆಲ್ಲುತ್ತಾರೆ ನೋಡೋಣ ಎಂದು ಸವಾಲು ಹಾಕಿದರು. ನೀವು ನಿಂತುಕೊಳ್ಳಿ. ಗೆದ್ದು ಲೋಕಸಭೆಗೆ ಹೋಗಿ ಚರ್ಚೆ ಮಾಡಲು ಸಮರ್ಥರಿದ್ದೀರಾ ಎಂದು ಪ್ರಶ್ನಿಸಿದರು.

ನಾನು ಇಲ್ಲಿದ್ದರೂ ಸಮರ್ಥನೆ, ಲೋಕಸಭೆಗೆ ಹೋದರೂ ಸಮರ್ಥನೆ. ಅಂತಾರಾಷ್ಟ್ರೀಯ ಸಂಸ್ಥೆಗೆ ಹೋದರೂ ಅಲ್ಲಿಯೂ ಸಮರ್ಥನಿದ್ದೇನೆ ಎಂದು ಸಿದ್ದರಾಮಯ್ಯ ತಿರುಗೇಟು ಕೊಟ್ಟರು.

ಈ ವೇಳೆ ನೂತನ ಪರಿಷತ್ ಸದಸ್ಯ ಪುಟ್ಟಣ್ಣ ಮಾತನಾಡಿ, ಬಿಜೆಪಿ ಬಿಡಲು ಕಾರಣ ಏನೆಂಬುದನ್ನು ಸದನದಲ್ಲಿ ಬಹಿರಂಗಪಡಿಸಿದರು. ನಾನು ಬಿಜೆಪಿ ಬಿಡಲು ಏನು ಕಾರಣ ಗೊತ್ತಾ.. ಹಿಂದಿನ ಬಿಜೆಪಿ ಸರ್ಕಾರದಲ್ಲಿ 140 ದಿನ ಅನುದಾನಿತ ಕಾಲೇಜಿನ ಶಿಕ್ಷಕರು ಧರಣಿ ಮಾಡಿದರು. ಮೂರು ಮಂದಿ ಶಿಕ್ಷಕರು ಆತ್ಮಹತ್ಯೆ ಮಾಡಿಕೊಂಡ್ರು. ಈ ವೇಳೆ ನಾನು, ಸಂಕನ್ನೂರ್ ಶಿಕ್ಷಕರ ಸಚಿವರ ಜೊತೆ ಸಭೆ ಮಾಡಿ ಎಂದು ಹೇಳಿದ್ದೆ. 3 ಮಂದಿ ಶಿಕ್ಷಕರು ಸಾವನ್ನಪ್ಪಿದ್ದಾರೆ, ಇನ್ನು ಕೆಲವರು ಸಾವನ್ನಪ್ಪುವ ಸಾಧ್ಯತೆ ಇದೆ. ಸಭೆ ಮಾಡಿ ಅವರಿಗೆ ಸಾಂತ್ವನ ಹೇಳಿ ಎಂದು ಮನವಿ ಮಾಡಿದ್ದೆ, ಆದರೆ ಸಭೆ ಮಾಡೊಲ್ಲ ಎಂದು ಸಚಿವರು ಹೇಳಿದ್ರು. ಆ ಕ್ಷಣದಲ್ಲೆ ನಿರ್ಧಾರ ಮಾಡ್ದೆ, ಈ ಪಕ್ಷದಲ್ಲಿ ನಾನು ಇರೊದಿಲ್ಲ ಎಂದು. ಈ ಬಾರಿ ಕಾಂಗ್ರೆಸ್ಸಿಂದ ನಿಂತು ಗೆಲುವು ಸಾಧಿಸಿದ್ದೇನೆ. ಶಿಕ್ಷಕರು ನನ್ನ ಕೈ ಹಿಡಿದಿದ್ದಾರೆ ಎಂದು ಹೇಳಿದರು.

ಸರ್ಕಾರಿ ನೌಕರರ ಮಹಾ ಸಮ್ಮೇಳನದಲ್ಲಿ ಸಿಎಂ 7ನೇ ವೇತನ ಆಯೋಗ ಘೋಷಣೆ: ಸಿ.ಎಸ್.ಷಡಾಕ್ಷರಿ

ದಾವಣಗೆರೆ: ಫೆಬ್ರವರಿ 27 ರಂದು ಬೆಂಗಳೂರು ನಗರದಲ್ಲಿ ನಡೆಯಲಿರುವ ರಾಜ್ಯ ಸರ್ಕಾರಿ ನೌಕರರ ಮಹಾ ಸಮ್ಮೇಳನದಲ್ಲಿ ಭಾಗವಹಿಸುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 7ನೇ ವೇತನ ಆಯೋಗದ ಜಾರಿ, ಉಚಿತ ಆರೋಗ್ಯ ಯೋಜನೆ ಘೋಷಣೆ ಮಾಡುವ ಎಲ್ಲಾ ವಿಶ್ವಾಸವಿದೆ ಎಂದು ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಅವರು ವಿಶ್ವಾಸ ವ್ಯಕ್ತಪಸಿದ್ದಾರೆ.

ಮಂಗಳವಾರ ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಅವರು ಮಾತನಾಡಿ, ಫೆಬ್ರವರಿ 27 ರಂದು 7ನೇ ವೇತನ ಆಯೋಗದ ಜಾರಿ, ಉಚಿತ ಆರೋಗ್ಯ ಯೋಜನೆ ಘೋಷಣೆ ಮಾಡುವ ಎಲ್ಲಾ ವಿಶ್ವಾಸವಿದೆ. ಹೀಗಾಗಿ ಮಹಾ ಸಮ್ಮೇಳನದಲ್ಲಿ ಸರ್ಕಾರಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ನೌಕರರಲ್ಲಿ ಮನವಿ ಮಾಡಿದರು.

ರಾಜ್ಯ ಯುವ ಕಾಂಗ್ರೆಸ್ ನೂತನ ಕಾರ್ಯಾಧ್ಯಕ್ಷರಾಗಿ ಹೆಚ್.ಎಸ್.ಮಂಜುನಾಥ್ ನೇಮಕ

ಬೆಂಗಳೂರು: ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದಂತೆ ಕಾಂಗ್ರೆಸ್ ಹೈಕಮಾಂಡ್ ಹೊಸ ರಣ–ತಂತ್ರ ರೂಪಿಸಿದೆ. ರಾಜ್ಯ ಯುವ ಕಾಂಗ್ರೆಸ್ ಗೆ ನೂತನ ಕಾರ್ಯಾಧ್ಯಕ್ಷರ ನೇಮಕ ಮಾಡಿದೆ.

ಯುವ ಕಾಂಗ್ರೆಸ್ ಕಾರ್ಯಾಧ್ಯಕ್ಷರಾಗಿ ಹೆಚ್.ಎಸ್. ಮಂಜುನಾಥ್ ಅವರನ್ನು ನೇಮಕ ಮಾಡಲಾಗಿದೆ. ಡಿಸಿಎಂ ಡಿ.ಕೆ.ಶಿವಕುಮಾರ್ ಆಪ್ತ ಬಳಗದಲ್ಲಿ ಗುರುತಿಸಿಕೊಂಡಿದ್ದ ಮಂಜುನಾಥ್ ಗೆ ಪಟ್ಟ ಕಟ್ಟಲಾಗಿದೆ.

ಈ ಮೂಲಕ ಕಾಂಗ್ರೆಸ್ ಲೋಕಸಭಾ ಚುನಾವಣೆಗೂ ಮುನ್ನ ಹೊಸ ತಂತ್ರ ಹೆಣೆದಿದೆ. ಮಂಜುನಾಥ್ ಈ ಹಿಂದೆ ಮಹಾಲಕ್ಷ್ಮೀ ಲೇಔಟ್ ನಿಂದ ಸ್ಪರ್ಧಿಸಿದ್ದರು. ಈಗ ಮಂಜುನಾಥ್ ಗೆ ಕಾರ್ಯಾಧ್ಯಕ್ಷ ಸ್ಥಾನ ನೀಡಿ ಕಾಂಗ್ರೆಸ್ ಹೈಕಮಾಂಡ್ ಆದೇಶ ಹೊರಡಿಸಿದೆ.

ಕರಂದ್ಲಾಜೆಗೆ ಲೋಕಸಭೆ ಟಿಕೇಟ್ ನೀಡದಂತೆ ಹೈಕಮಾಂಡ್‌ಗೆ ಕಾರ್ಯಕರ್ತರಿಂದ ಪತ್ರ

ಬೆಂಗಳೂರು: ಮುಂಬರುವ ಲೋಕಸಭಾ ಚುನಾವಣೆಗೆ ಕೇಂದ್ರ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆಗೆ ಟಿಕೇಟ್ ನೀಡಂತೆ ಬಿಜೆಪಿ ಕಾರ್ಯಕರ್ತರು ಬಿಜೆಪಿ ಹೈಕಮಾಂಡ್‌ಗೆ ಪತ್ರ ಬರೆಯುವುದರ ಮೂಲಕ ತಮ್ಮ ಅಸಮಾಧಾನವನ್ನು ಹೊರ ಹಾಕಿದ್ದಾರೆ.

ಎರಡು ಬಾರಿ ಸಂಸದೆಯಾಗಿ ಆಯ್ಕೆಯಾಗಿದ್ದರು ಕೂಡ ಶೋಭಾ ಕರಂದ್ಲಾಜೆ ಅವರು ಯಾವುದೇ ರೀತಿಯಲ್ಲಿ ಸ್ಥಳೀಯ ಸಮಸ್ಯೆಗಳಿಗೆ ಸ್ಪಂದಿಸಿಲ್ಲ, ಅವರಿಗೆ ಮತ್ತೆ ಟಿಕೇಟ್ ನೀಡಬಾರದು ಅಂತ ಸರಿಸುಮಾರು ಐದು ಸಾವಿರ ಮಂದಿ ಬಿಜೆಪಿ ನಾಯಕ–ರಿಗೆ ಪೋಸ್ಟ್‌ಕಾರ್ಡ್ ಮೂಲಕ ಪತ್ರವನ್ನು ಬರೆದು ತಮ್ಮ ಅಸಮಧಾವನ್ನು ಹೊರ ಹಾಕಿದ್ದಾರೆ. ಕಳೆದ ವಾರ ಕೂಡ ಉಡ–ುಪಿಯಲ್ಲಿ ನಡೆದ ಸಭೆಯೊಂದರಲ್ಲಿ ಮೀನುಗಾರ ಸಭೆಯಲ್ಲಿ ನೇರವಾಗಿ ಶೋಭಾ ಕರಂದ್ಲಾಜೆ ಮುಂದೆ ಸ್ಥಳೀಯ ಜನತೆ ಅವರನ್ನು ಪ್ರಶ್ನೆ ಮಾಡಿದ್ದನ್ನು ಸ್ಮರಿಸಬಹುದಾಗಿದೆ.

ತಿರುವನಂತಪುರಂ–ಕಾಸರಗೋಡು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಮಂಗಳೂರಿನವರೆಗೆ ವಿಸ್ತರಣೆ

ಮಂಗಳೂರು: ತಿರುವನಂತಪುರಂ–ಕಾಸರಗೋಡು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲನ್ನು ಮಂಗಳೂ–ರಿನವರೆಗೆ ವಿಸ್ತರಿಸುವ ಪ್ರಸ್ತಾವನೆಗೆ ರೈಲ್ವೆ ಸಚಿವಾಲಯ ಬುಧವಾರ ಅನುಮೋದನೆ ನೀಡಿದೆ.

ರೈಲ್ವೆ ಮಂಡಳಿಯ ಜಂಟಿ ನಿರ್ದೇಶಕ(ಕೋಚಿಂಗ್) ವಿವೇಕ್ ಕುಮಾರ್ ಸಿನ್ಹಾ ಅವರ ಪ್ರಕಟಣೆಯ ಪ್ರಕಾರ, ಮಂಗಳೂರು–ತಿರುವನಂತಪುರಂ ವಂದೇ ಭಾರತ್ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ. 20631) ಮಂಗಳೂ–ರಿನಿಂದ ಬೆಳಗ್ಗೆ 6.15 ಕ್ಕೆ ಹೊರಟು, ಮಧ್ಯಾಹ್ನ 3.05ಕ್ಕೆ ತಿರುವನಂತಪುರಂ ತಲುಪಲಿದೆ. ಬುಧವಾರ ಹೊರತುಪಡಿಸಿ ವಾರದ ಆರು ದಿನ ಈ ವಂದೇ ಭಾರತ್ ರೈಲು ಸಂಚ–ರಿಸಲಿದೆ.

ತಿರುವನಂತಪುರಂ–ಮಂಗಳೂರು ಎಕ್ಸ್‌ಪ್ರೆಸ್(ರೈಲು ಸಂಖ್ಯೆ 20632) ರೈಲು ತಿರುವನಂತಪುರದಿಂದ ಸಂಜೆ 4.05 ಕ್ಕೆ ಹೊರಟು ಮಧ್ಯ ರಾತ್ರಿ 12.40 ಕ್ಕೆ ಮಂಗಳೂರು ತಲುಪಲಿದೆ.

ಈ ಮಾರ್ಗದಲ್ಲಿ ರೈಲು ಕಾಸರಗೋಡು, ಕಣ್ಣೂರು, ಕೋ–ಝಿಕ್ಕೋಡ್ ಮೇನ್, ತಿರೂರ್, ಶೋರನೂರು, ತ್ರಿಶೂರ್, ಎರ್ನಾಕುಲಂ, ಆಲಪ್ಪುಳ ಮತ್ತು ಕೊಲ್ಲಂನಲ್ಲಿ ನಿಲ್ಲುತ್ತದೆ.

ಈ ರೈಲುಗಳ ಪ್ರಾಥಮಿಕ ನಿರ್ವಹಣೆಯು ಮಂಗಳೂ–ರಿನಲ್ಲಿ ನಡೆಯಲಿದೆ ಎಂದು ಸಿನ್ಹಾ ಅವರು ತಿಳಿಸಿದ್ದಾರೆ.

ಮಂಗಳೂರಿನವರೆಗೆ ರೈಲನ್ನು ವಿಸ್ತರಿಸುವಂತೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಮನವಿ ಮಾಡಿದ್ದ ದಕ್ಷಿಣ ಕನ್ನಡ ಸಂಸದ ನಳಿನ್ ಕುಮಾರ್ ಕಟೀಲ್, ಅದನ್ನು ಅನುಮೋದಿಸಿದ್ದಕ್ಕಾಗಿ ಅವರಿಗೆ ಧನ್ಯವಾದ ಅರ್ಪಿಸಿದ್ದಾರೆ.

ಪೂರ್ವ ಸಿದ್ಧತೆ ಪರಿಶೀಲನೆ

ಬೆಳಗಾವಿ: ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಬೆಳಗಾವಿ ರಿಂಗ್ ರಸ್ತೆ ಹಾಗೂ ಉತ್ತರ ಕರ್ನಾಟಕದ 8 ಜಿಲ್ಲೆಗಳಿಗೆ ಸಂಬಂಧಿಸಿದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಪೂಜಾ ಸಮಾರಂಭಕ್ಕೆ ಇಂದು ಬೆಳಗಾವಿ ನಗರಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಸಮಾರಂಭದ ಪೂರ್ವ ಸಿದ್ಧತೆಗಳನ್ನು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ಅಧಿಕಾರಿಗಳೊಂದಿಗೆ ತೆರಳಿ ಪರಿಶೀಲಿಸಿದರು.

ಕೇಂದ್ರ ಸಚಿವ ನಿತಿನ್ ಗಡ್ಕರಿ ಇಂದು ಬೆಳಗಾವಿಗೆ ಭೇಟಿ

ಬೆಳಗಾವಿ: ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಗುರುವಾರ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ.

ರಾಜ್ಯದಲ್ಲಿ ಕೆಲವು ಕಾರ್ಯಕ್ರಮಗಳಿಗೆ ಚಾಲನೆ ಮತ್ತು ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಗುರುವಾರ ಬೆಳಗ್ಗೆ ದೆಹಲಿಯಿಂದ ಹೊರಟು ವಿಶೇಷ ವಿಮಾನದ ಮೂಲಕ ಬೆಳಗಾವಿಗೆ ಆಗಮಿಸಲಿದ್ದಾರೆ.

ಮಧ್ಯಾಹ್ನ 12.30 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬೆಳಗಾವಿಯಿಂದ ಹೊರಟು ಮಧ್ಯಾಹ್ನ 2.40ಕ್ಕೆ ಶಿವಮೊಗ್ಗ ತಲುಪಲಿದ್ದಾರೆ.

ಮಧ್ಯಾಹ್ನ 3.15ಕ್ಕೆ ಶಿವಮೊಗ್ಗದಲ್ಲಿ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸುವ ಅವರು, ಸಂಜೆ ಶಿವಮೊಗ್ಗದಿಂದ ಬೆಂಗಳೂರಿಗೆ ತೆರಳಲಿದ್ದಾರೆ. ರಾತ್ರಿ ಆರ್ಟ್ ಆಫ್ ಲಿವಿಂಗ್ ಅಂತರಾಷ್ಟ್ರೀಯ ಕೇಂದ್ರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಶುಕ್ರವಾರ ಬೆಳಗ್ಗೆ ಮಹಾರಾಷ್ಟ್ರದ ಲಾತೂರ್‌ಗೆ ತೆರಳಲಿದ್ದಾರೆ.

ನಿತಿನ್ ಗಡ್ಕರಿ ಅವರು ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ 6,975 ಕೋಟಿ ರೂ. ಮೌಲ್ಯದ 15 ಕಾಮಗಾರಿಗಳಿಗೆ ವರ್ಚುವಲ್ ಮೂಲಕ ಚಾಲನೆ ನೀಡಲಿದ್ದಾರೆ. ಅದೇ ರೀತಿ ಶಿವಮೊಗ್ಗದ ನೆಹರು ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಒಟ್ಟು 6,168.41 ಕೋಟಿ ರೂ. ವೆಚ್ಚದ ರಸ್ತೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇ–ರಿಸಲಿದ್ದಾರೆ.

ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಗುರುವಾರ ಬೆಳಗಾವಿ, ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರೊಂದಿಗೆ ಪ್ರವಾಸದಲ್ಲಿ ಪಾಲ್ಗೊಳ್ಳಲಿದ್ದಾರೆ.

ಹಿಡಕಲ್ ಜಲಾಶಯದಿಂದ ಘಟಪ್ರಭಾ ನದಿಗೆ ನೀರು ಹರಿಸಲು ಸಚಿವ ಸತೀಶ್ ಜಾರಕಿಹೊಳಿ ಸೂಚನೆ

ಬೆಳಗಾವಿ: ಹಿಡಕಲ್ ಜಲಾಶಯದಿಂದ ಪ್ರಟಪ್ರಭಾ ನದಿಗೆ 2 ಟಿಎಂಸಿ ನೀರು ಹ–ರಿಸಲು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಆದೇಶ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ವಿಷಯ ತಿಳಿಸಿದ ಅವರು, ಪ್ರಸ್ತುತ ಬಾಗಲಕೋಟ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇರುವುದರಿಂದ ಹಾಗೂ ಮಳೆಯ ಕೊರತೆಯಿಂದಾಗಿ ಜನ– ಜಾನುವಾರುಗಳಿಗೆ ನೀರಿನ ಅಭಾವ ಉಂಟಾಗಿದ್ದು, ದಿನಾಂಕ: 19.02.2024 ರಿಂದ ಹಿಡಕಲ್ ಜಲಾಶಯದಿಂದ ಘಟಪ್ರಭಾ ನದಿಗೆ ಕುಡಿಯುವ ಉದ್ದೇಶಕ್ಕಾಗಿ ಬಾಗಲಕೋಟ ಮತ್ತು ಮಾರ್ಗ ಮಧ್ಯದ ಹಳ್ಳಿಗಳಿಗೆ ಸರ್ಕಾರದ ಆದ–ೇಶದನ್ವಯ ಕಾಯ್ದಿರಿಸಿದ 5.00 ಟಿ.ಎಂ.ಸಿಯಲ್ಲಿ 2.00 ಟಿ.ಎಂ.ಸಿ ನೀರನ್ನು ಹರಿಸಲು ಸಚಿವ ಸತೀಶ್ ಜಾರಕಿಹೊಳಿ ನಿರ್ದೇಶನ ನೀಡಿರುತ್ತಾರೆ.

ಅದರಂತೆ ಬಾಗಲಕೋಟಿ ಮತ್ತು ಮಾರ್ಗ ಮಧ್ಯದ ಹಳ್ಳಿಗಳಿಗೆ ನದಿ ಪಾತ್ರದ ಮೂಲಕ ಹರಿಬಿಡುವ ಪರಿಮಾಣದಲ್ಲಿ ಇನ್ನು 3.00 ಟಿ.ಎಂ.ಸಿ ನೀರು ಹರಿಬಿಡುವುದು ಬಾಕಿ ಉಳಿದಿರುತ್ತದೆ. ಮುಂದುವರೆದು ಶ್ರೀ ರಾಮೇಶ್ವರ ಏತ ನೀರಾವರಿ ಯೋಜನೆ ಮೂಲಕ ಕುಡಿಯುವ ಉದ್ದೇಶಕ್ಕಾಗಿ ಕೆರೆ ತುಂಬಿಸಲು 0.07 ಟಿ.ಎಂ.ಸಿ ನೀರನ್ನು ಸೇರಿಸಿ ಒಟ್ಟು 2.07 ಟಿ.ಎಂ.ಸಿ ನೀರನ್ನು ಘಟಪ್ರಭಾ ನದಿಗೆ ಈ ಕೆಳಗಿನಂತೆ ನೀರು ಹರಿಸುವ ಕುರಿತು ಸಚಿವ ಜಾರಕಿಹೊಳಿ ಆದೇಶ ಹೊರಡಿಸಿದ್ದಾರೆ. ಆದ್ದ–ರಿಂದ ಬಾಗಲಕೋಟೆ ಜಿಲ್ಲೆಯ ಭಾಗದ ರೈತರು ಹಾಗೂ ಸಾರ್ವಜನಿಕರು ನೀರನ್ನು ಪೋಲಾಗದಂತೆ ಸದುಪಯೋಗ ಪಡೆದುಕೊಳ್ಳಲು ಮುಂದಾಗಬೇಕು ಎಂದು ತಿಳಿಸಿದ್ದಾರೆ.

ಬೆಳಗಾವಿ ಗಡಿವಿವಾದ: ಹೈವೋಲ್ಟೇಜ್ ಮೀಟಿಂಗ್ ಕರೆದ ಮಹಾರಾಷ್ಟ್ರ ಸರ್ಕಾರ

ಬೆಳಗಾವಿ: ಗಡಿ ವಿವಾದ ಪ್ರಕರಣವನ್ನು ಮಹಾರಾಷ್ಟ್ರ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಗಡಿವಿವಾದ ಸಂಬಂಧ ಮುಂಬೈನಲ್ಲಿ ಮಹಾರಾಷ್ಟ್ರ ಸರ್ಕಾರ ಸಭೆ ಕರೆದಿದೆ.

ಮುಂಬೈನಲ್ಲಿರುವ ಮಹಾರಾಷ್ಟ್ರ ಮಂತ್ರಾಲಯ (ವಿಧಾನಸೌಧ) ದ ಕಚೇರಿ

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಮಹದಾಯಿ ಹೋರಾಟಗಾರರ ಮತ್ತು ಜಿಲ್ಲೆಯ ರೈತ ಮುಖಂಡರ ಸಭೆ

ಧಾರವಾಡ: ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಅಧ್ಯಕ್ಷತೆಯಲ್ಲಿ ಇಂದು ಮದ್ಯಾಹ್ನ ಜಿಲ್ಲಾಧಿಕಾರಿಗಳ ಕಚೆರಿ ಸಭಾಂಗಣದಲ್ಲಿ ಬೆಳೆವಿಮೆ ಪರಿಹಾರ, ಬೆಳೆಪರಿಹಾರ, ಮಹದಾಯಿ ಯೋಜನೆ ಅನುಷ್ಠಾನ ಕುರಿತು ಮಹದಾಯಿ ಹೋರಾಟಗಾರರ ಹಾಗೂ ಜಿಲ್ಲೆಯ ರೈತ ಮುಖಂಡರ ಸಭೆ ಜರುಗಿತು.

ಸಭೆಯಲ್ಲಿ ರೈತ ಮುಖಂಡರು ಮಹದಾಯಿ ನಿರಾವರಿ ಯೊಜನೆ ಅನಷ್ಠಾನ, ಹೆಸ್ಕಾಂದಿಂದ ನಿರಂತರ ವಿದ್ಯುತ್ ಪೂರೈಕೆ, ಕುಂದುಗೋಳ ಭಾಗದ ರೈತರ ಜಮಿನುಗಳಲ್ಲಿ ಚಿಗರಿ ಹಾವಳಿ, ಬೆಳೆವಿಮೆ ಪರಿಹಾರ, ಮದ್ಯಂತರ ಬೆಳೆವಿಮೆ ಪರಿಹಾರ, ಅತಿವೃಷ್ಟಿಯಲ್ಲಿನ ಮನೆಹಾನಿ ಪರಿಹಾರ ಬಿಡುಗಡೆ, ಬ್ಯಾಂಕ್ಗಳಿಂದ ಓಟಿ-ಎಸ್ ತೊಂದರೆ, ಅಣ್ಣಿಗೇರಿಯ ಗ್ರಾಮ ಚಾವಡಿ, ಜಿಲ್ಲೆಯ ಕೆರೆಗಳಿಗೆ ಕಾಳಿನದಿ ನೀರು ಪೂರೈಕೆ, ಪಹಣಿ ಪತ್ರಿಕೆಯಲ್ಲಿನ ವಿಷಯಗಳ ಅಪಡೆಟ್, ನಮ್ಮ ಹೊಲ-ನಮ್ಮ ದಾರಿ ಯೋಜನೆ ಜಾರಿ ಮತ್ತು ಮಹದಾಯಿ ಹಾಗೂ ಉತ್ತರ ಕರ್ನಾಟಕದ ಕೃಷಿ, ನೀರಾವರಿ, ರೈತರ ಸಮಸ್ಯೆಗಳ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲು ರೈತ ಮುಖಂಡರಿಗೆ ಸಮಯಾವಕಾಶ ನೀಡಲು ಮನವಿ ಮಾಡಿದರು.

ರೈತರ ಆತ್ಮಹತ್ಯೆ, ದನಗಳಿಗೆ ಮೇವು ಪೂರೈಕೆ, ಕುಡಿಯುವ ನೀರು, ಕೂಲಿ ಉದ್ಯೋಗ ನಿಡುವ ಬಗ್ಗೆ ಕಾಳಜಿ ವಹಿಸುವಂತೆ ಜಿಲ್ಲಾಧಿಕಾರಿಗಳಲ್ಲಿ ರೈತರು ವಿನಂತಿಸಿದರು.

ಸಭೆಯಲ್ಲಿ ಉಪಸ್ಥಿತರಿದ್ದ ನವಲಗುಂದ ಶಾಸಕ ಎನ್.ಎಚ್.ಕೋನರಡ್ಡಿ ಅವರು ಮಾತನಾಡಿ, ಮಹದಾಯಿ ಯೋಜನೆ ಜಾರಿಗೆ ನಾನು ಒಬ್ಬ ರೈತನಾಗಿ, ಹೊರಾಟಗಾರನಾಗಿ ಬದ್ಧನಾಗಿದ್ದೇನೆ. ಪ್ರಸಕ್ತ ರಾಜ್ಯ ಬಜೆಟದಲ್ಲಿ ಮುಖ್ಯಮಂತ್ರಿಗಳು ಅನುದಾನ ನೀಡಿದ್ದಾರೆ. ಕೆಂದ್ರ ಸಚಿವರು ಆಗಿರುವ ನಮ್ಮ ಸಂಸದರೊಂದಿಗೆ ರೈತರ ಸಭೆ ಜರುಗಿಸಿ, ಕೇಂದ್ರದ ಸಹಕಾರದಲ್ಲಿ ಮಹದಾಯಿ ಯೋಜನೆ ಅನುಷ್ಠಾನಕ್ಕೆ ಕ್ರಮವಹಿಸೋಣ ಎಂದರು.

ಜಿಲ್ಲೆಯ ರೈತರಿಗೆ ಮದ್ಯಂತರ ಬೆಳೆ ಪರಿಹಾರವಾಗಿ ಈಗಾಗಲೇ ಸುಮಾರು 70 ಕೋಟಿ ಬಿಡುಗಡೆ ಆಗಿದೆ.

ಶೀಘ್ರದಲ್ಲಿ ಪೂರ್ಣ ಪ್ರಮಾಣದ ಬೆಳೆವಿಮೆ ಬಿಡುಗಡೆ ಆಗುತ್ತದೆ. ರಾಜ್ಯ ಸರ್ಕಾರ ಆರಂಭಿಕವಾಗಿ ರೂ. 2 ಸಾವಿರ ಬೆಳೆ ಪರಿಹಾರ ಹಣವನ್ನು ನೇರವಾಗಿ ರೈತರ ಖಾತೆಗೆ ಜಮೆ ಮಾಡಿದೆ. ಇನ್ನು ಇದು ಪ್ರಗತಿಯಲ್ಲಿದೆ. ಕೇಂದ್ರದಿಂದ ಸುಮಾರು 17

ಸಾವಿರ ಕೋಟಿ ಪರಿಹಾರ ಬಿಡುಗಡೆ ಆಗುವ ನಿರೀಕ್ಷೆ ಇದೆ. ಇದಕ್ಕೆ ರಾಜ್ಯದ ಪಾಲು ಸೇರಿಸಿ, ರೈತರಿಗೆ ಪರಿಹಾರ ಹಣ ನೀಡಲಾಗುವುದು ಎಂದು ಶಾಸಕರು ಹೇಳಿದರು.

ರೈತರ ಮೇಲಿನ ಪ್ರಕರಣಗಳನ್ನು ಹಿಂಪಡೆಯಲು ರಾಜ್ಯ ಸರ್ಕಾರ ಕ್ರಮವಹಿಸಿ, ಈಗಾಗಲೇ 50 ಕ್ಕೂ ಹೆಚ್ಚು ವಿವಿಧ ರೈತ ಪ್ರಕರಣಗಳನ್ನು ಹಿಂಪಡೆಯಲಾಗಿದೆ. ಎಲ್ಲ ಪ್ರಕರಣಗಳನ್ನು ಪರಿಶೀಲಿಸಿ, ಕ್ರಮವಹಿಸುವುದಾಗಿ ಮುಖ್ಯಮಂತ್ರಿಗಳು ತಿಳಿಸಿದ್ದಾರೆ. ಮಹದಾಯಿ ಹಾಗೂ ಉತ್ತರ ಕರ್ನಾಟಕದ ರೈತರ ಸಮಸ್ಯೆಗಳ ಕುರಿತು ಮುಖ್ಯಮಂತ್ರಿಗಳೊಂದಿಗೆ ರೈತರ ಸಭೆ ನಡೆಸಲು ಚುನಾವಣಾ ಪೂರ್ವದಲ್ಲಿ ಅಥವಾ ಚುನಾವಣೆ ನಂತರ ಸಮಯ ನಿಗದಿಪಡಿಸಲು ಪ್ರಯತ್ನಿಸುತ್ತೇನೆ ಮತ್ತು ಮುಖ್ಯಮಂತ್ರಿಗಳ ಸಮಯಾವಕಾಶ ನೋಡಿಕೊಂಡು ನಾಳೆಯ ನವಲಗುಂದ ಕಾರ್ಯಕ್ರಮದಲ್ಲಿ ರೈತ ಮುಖಂಡರನ್ನು ಭೇಟಿ ಮಾಡಿಸಲು ಪ್ರಯತ್ನಿಸಲಾಗುವುದು. ಈ ಕುರಿತು ಕಾರ್ಯಕ್ರಮದಲ್ಲಿ ಸ್ಥಳ ಗುರುತಿಸಲು ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಶಾಸಕರು ತಿಳಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಧಾರವಾಡ ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಧಾರವಾಡ ಮಾದರಿ ಜಿಲ್ಲೆ ಆಗಬೇಕು. ಇದಕ್ಕೆ ಧಾರವಾಡ ಜಿಲ್ಲೆಯ ಪ್ರತಿಯೊಬ್ಬರ ಸಹಕಾರ ಬೇಕು ಎಂದರು.

ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರು, ಜನ ಜಾನುವಾರು ಮೇವು, ನೀರಿನ ಕೊರತೆ ಆಗದಂತೆ ಕ್ರಮ ಕೈಗೊಳ್ಳಲಾಗಿದೆ. ಗೋಶಾಲೆ ಪ್ರಾರಂಭವಾಗಿದೆ. ಜಿಲ್ಲೆಯ 14 ಸ್ಥಳಗಳಲ್ಲಿ ಮೇವು ಬ್ಯಾಂಕ್ ಆರಂಭಿಸಲು ಸ್ಥಳ ಗುರುತಿಸಲಾಗಿದೆ. ರೈತರಿಗೆ ಬ್ಯಾಂಕ್ಗಳಲ್ಲಿ ಆಗುತ್ತಿರುವ ಓಟಿಎಸ್ ಸಮಸ್ಯೆ ಪರಿಹರಿಸಲು ಲೀಡ್ ಬ್ಯಾಂಕ್ ಮ್ಯಾನೇಜರ್ ಮೂಲಕ ಎಲ್ಲಾ ಬ್ಯಾಂಕ್ಗಳಿಗೆ ನಿರ್ದೇಶನ ನೀಡಲಾಗುವುದು. ರೈತರಿಗೆ ಯಾವುದೇ ಸಮಸ್ಯೆಗಳಿದ್ದಲ್ಲಿ ಜಿಲ್ಲಾಡಳಿತದ ಗಮನಕ್ಕೆ ತಂದರೆ, ಸಮಸ್ಯೆ ಪರಿಹರಿಸಲು ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪೊಲೀಸ್ ಅಧಿಕ್ಷಕ ಡಾ.ಗೋಪಾಲ್ ಬ್ಯಾಕೋಡ್ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಮಟಕಾ, ಜೂಜು ಮತ್ತು ಅನಧಿಕೃತವಾಗಿ ಸರಾಯಿ ಮಾರಾಟ ಮಾಡುವುದನ್ನು ನಿಯಂತ್ರಿಸಲು ಎಲ್ಲ ಪೊಲೀಸ್ ಠಾಣೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಪೊಲೀಸ್ ಬಿಟ್ ವ್ಯವಸ್ಥೆ ಹೆಚ್ಚಿಸಿ, ಚುರುಕುಗೊಳಿಸಲಾಗಿದೆ. ಯಾವುದೇ ಗ್ರಾಮಗಳಲ್ಲಿ ಅಪರಾಧ ಕೃತ್ಯಗಳು, ಕಾನೂನುಬಾಹಿರ ಚಟುವಟಿಕೆಗಳು ನಡೆಯುತ್ತಿದ್ದರೆ ಜಿಲ್ಲಾ ಪೊಲೀಸ್ ಇಲಾಖೆಗೆ ಮಾಹಿತಿ ನೀಡಲು ಅವರು ತಿಳಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ. ಕಿರಣಕುಮಾರ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು. ಸಭೆಯಲ್ಲಿ ತೋಟಗಾರಿಕಾ ಇಲಾಖೆ ಉಪ ನಿರ್ದೇಶಕ ಕೆ.ಸಿ.ಬದ್ರಣ್ಣನವರ, ಕೃಷಿ ಇಲಾಖೆ ಉಪ ನಿರ್ದೇಶಕಿ ಜಯಶ್ರೀ ಹಿರೇಮಠ, ಎಸ್ಬಿಐ ವಿಮಾ ಕಂಪನಿಯ ಉಮೇಶ ಕಾಂತಾ, ವಿವಿಧ ತಾಲೂಕುಗಳ ಸಹಾಯಕ ಕೃಷಿ ನಿರ್ದೇಶಕರು ಮತ್ತು ರೈತ ಮುಖಂಡರಾದ ಶಂಕರ ಅಂಬಲಿ, ಲೋಕನಾಥ ಹೆಬಸೂರ, ಶಿವಣ್ಣ ಹೆಬ್ಬಳ್ಳಿ, ವೀರೇಶ ಸೊಬರದಮಠ, ಭಗವಂತಪ್ಪ ಪಟ್ಟಣದ, ದಿವಟೆ ಗೋಪಾಲ, ರಮೇಶ ಕೊರವಿ, ಬಸವರಾಜ ಜೋಗಪ್ಪನವರ, ಹಣಮಂತ ಬೂದಿಹಾಳ, ರಘುನಾಥ ನಡುವಿನಮನಿ, ಮಹೇಶ್ ಕುಲಕರ್ಣಿ, ಮಾಣಿಕ್ಯಮ್ಮ, ಮಲ್ಲಿಕಾರ್ಜುನ ಬಾಳನಗೌಡರ, ಎ.ಪಿ.ಗುರಿಕಾರ, ಸುಭಾಷಚಂದ್ರಗೌಡ ಪಾಟೀಲ ಸೇರಿದಂತೆ ಧಾರವಾಡ ಜಿಲ್ಲೆಯ ಎಲ್ಲ ತಾಲೂಕುಗಳ ರೈತ ಪ್ರತಿನಿಧಿಗಳು, ಮಹಿಳಾ ರೈತ ಪ್ರತಿನಿಧಿಗಳು ಭಾಗವಹಿಸಿ, ಸಭೆಯಲ್ಲಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಬಳ್ಳಾರಿ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಫೆ.29 ರವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ವೃತ್ತಿಪರ, ಸ್ನಾತಕೋತ್ತರ ಪದವಿ ಕೋರ್ಸ್ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಮಾತ್ರ ಅರ್ಹರಾಗಿರುತ್ತಾರೆ.

ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗದ ಪೇಷಕರ ಆದಾಯ 2.50 ಲಕ್ಷ ಇರಬೇಕು.

ಪ್ರವರ್ಗ-2 2ಎ, 2ಬಿ, 3ಎ, 3ಬಿ ವರ್ಗದ ಪೇಷಕರ ಆದಾಯ 1 ಲಕ್ಷವಿರಬೇಕು. ವಿದ್ಯಾರ್ಥಿಗಳು ಇಲಾಖೆಯ ಆನ್ಲೈನ್ ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸುವ ಸಂಧರ್ಭದಲ್ಲಿ ತಾಂತ್ರಿಕದೋಷ ಕಂಡುಬಂದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾ ಅಥವಾ ತಾಲ್ಲೂಕು ಅಧಿಕಾರಿಗಳ ಕಚೇರಿ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8050770005 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೆ.23 ರಂದು ತುರ್ತು ನೀರಾವರಿ ಸಲಹಾ ಸಮಿತಿ ಸಭೆ

ಬಳ್ಳಾರಿ: ಬೇಸಿಗೆಯಲ್ಲಿ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸುವ ನಿಟ್ಟಿನಲ್ಲಿ ತುಂಗಾಭದ್ರಾ ಯೋಜನೆಯ ಮತ್ತು ವಿಜಯನಗರ ಕಾಲುವೆಗಳ 121 ನೇ ತುರ್ತು ನೀರಾವರಿ ಸಲಹಾ ಸಮಿತಿ ಸಭೆಯನ್ನು ಫೆ.23 ರಂದು ಸಂಜೆ 04 ಗಂಟೆಗೆ ಬೆಂಗಳೂರಿನ ವಿಧಾನಸೌಧದ 3 ನೇ ಮಹಡಿಯ ಕೊಠಡಿ ಸಂಖ್ಯೆ.334 ರ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಮತ್ತು ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರೂ ಆದ ಶಿವರಾಜ ಎಸ್. ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ತುಂಗಾಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಧೂಮಪಾನ ಪ್ರಿಯರಿಗೆ ಶಾಕ್ ಕೊಟ್ಟ ಸರ್ಕಾರ

ಬೆಂಗಳೂರು: ಧೂಮಪಾನವನ್ನು ಇನ್ನು ಮುಂದೆ ಕಂಡ ಕಂಡಲ್ಲಿ ಸಿಗರೇಟ್ ಸೇದುವಂತಿಲ್ಲ. ಸಾರ್ವಜನಿಕರಿಗೆ ತೊಂದರೆಯಾಗುವ ರೀತಿಯಲ್ಲಿ ಹೊಗೆ ಬಿಟ್ಟರೆ, ಅಂಥವರ ಜೇಬು ಸುಡುತ್ತದೆ. ಸಾರ್ವಜನಿಕ ಸ್ಥಳಗಳಲ್ಲಿ ಸಿಗರೇಟ್ ಸೇದಿದರೆ 1 ಸಾವಿರ ರೂಪಾಯಿ ದಂಡ ಪಾವತಿ ಮಾಡಬೇಕಿದೆ. ಇಂಥದ್ದೊಂದು ವಿಧೇಯಕವನ್ನು ವಿಧಾನಮಂಡಲ ಅಧಿವೇಶನದಲ್ಲಿ ರಾಜ್ಯ ಸರ್ಕಾರ ಮಂಡಿಸಿ ಅನುಮೋದನೆ ಪಡೆದುಕೊಳ್ಳಲಾಗಿದೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈ ವಿಧೇಯಕವನ್ನು ಮಂಡಿಸಿದ್ದು, ಕಠಿಣ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ.

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು 2024ರ ಸಿಗರೇಟ್ ಸೇವನೆ ಮತ್ತು ಜಾಹೀರಾತು ನಿಷೇಧ.. ವ್ಯಾಪಾರ ಮತ್ತು ವಾಣಿಜ್ಯ ಉತ್ಪಾದನೆ ಮತ್ತು ಸರಬರಾಜು ತಿದ್ದುಪಡಿ ವಿಧೇಯಕವನ್ನು ಮಂಡನೆ ಮಾಡಿದರು. ಈ ವೇಳೆ ಮಾತನಾಡಿದ ಸಚಿವ ದಿನೇಶ್ ಗುಂಡೂರಾವ್, ಹುಕ್ಕಾಬಾರ್ಗಳನ್ನು ನಿಷೇಧ ಮಾಡಲಾಗಿದೆ. ಸಾರ್ವಜನಿಕ ಸ್ಥಳದಲ್ಲಿ ಸಿಗರೇಟ್ ಸೇದಬಾರದು ಅಂತಿದೆ. ಆದರೆ, ಅನೇಕ ಬಾರ್ ಮತ್ತು ರೆಸ್ಟೋರೆಂಟ್ಗಳಲ್ಲಿ ಹುಕ್ಕಾ ಬಾರ್ಗಳನ್ನು ಆರಂಭಿಸಿದ್ದಾರೆ. ಸಿಗರೇಟ್ ಸೇದೋದೇ ತಪ್ಪು ಅಂತ ಹೇಳಿದರೆ, ಮತ್ತೊಂದು ರೂಪದಲ್ಲಿ ತಂದಿದ್ದಾರೆ. ಇದಕ್ಕೆ ಕಡಿವಾಣ ಹಾಕಲು ಮುಂದಾಗಿದ್ದೇವೆ ಎಂದು ತಿಳಿಸಿದರು.

ಕಾನೂನಿನಲ್ಲಿ 18 ವರ್ಷದೊಳಗಿನವರಿಗೆ ಮಾರಬಾರದು ಎಂದು ಇತ್ತು. ಅದನ್ನು

21 ವರ್ಷಕ್ಕೆ ಅಂತ ಏರಿಸಲಾಗಿದೆ. ಶಾಲಾ-ಕಾಲೇಜುಗಳ ಮೂರು ಮೀಟರ್ ಒಳಗೆ ಮಾರಾಟ ಮಾಡಬಾರದು ಅಂತ ನಿಯಮ ಇದೆ. ಸಾರ್ವಜನಿಕ ಸ್ಥಳಗಳಲ್ಲಿ ಸಿಗರೇಟ್ ಸೇದುವವರಿಗೆ ಇನ್ನೂರು ದಂಡ ಇತ್ತು. ಈಗ ಸಿಗರೇಟ್ ಸೇದುವವರಿಗೆ 1000 ರೂ. ದಂಡ ಹಾಕಲಾಗುವುದು. ಆರೋಗ್ಯ ಕಾಪಾಡುವುದು ನಮ್ಮ ಕರ್ತವ್ಯ. ಯುವಕರು ಹುಕ್ಕಾ ಬಾರ್ಗೆ ಹೋಗಿ ಅಡಿಕ್ಟ್ ಆಗುತ್ತಿದ್ದಾರೆ. ಯುವ ಜನತೆ ಇದನ್ನು ಫ್ಯಾಷನ್ ಮಾಡಿಕೊಂಡಿದ್ದಾರೆ. ಇದರಿಂದ ಬೇರೆ ರೀತಿಯ ಅಡ್ಡ ಪರಿಣಾಮ ಆಗುತ್ತಿದೆ ಎಂದು ದಿನೇಶ್ ಗುಂಡೂರಾವ್ ಕಳವಳ ವ್ಯಕ್ತಪಡಿಸಿದರು.

ವಿಪಕ್ಷ ನಾಯಕ ಅಶೋಕ್ ಮಾತನಾಡಿ, ಇದು ಒಳ್ಳೆಯ ನಿರ್ಧಾರವಾಗಿದೆ. ಇನ್ನೆರಡು ನಿಯಮಗಳನ್ನು ಸೇರಿಸಿ. ಶಾಲಾ-ಕಾಲೇಜುಗಳ ನೂರು ಮೀಟರ್ ಒಳಗೆ ಮಾರಾಟ ಮಾಡಿದರೆ ಸಾವಿರ ಅಲ್ಲ, ಹತ್ತು ಸಾವಿರ ರೂಪಾಯಿ ದಂಡ ಹಾಕಲಾಗುವುದು ಎಂಬುದನ್ನು ಸೇರ್ಪಡೆ ಮಾಡಿ ಎಂದು ಸಲಹೆ ನೀಡಿದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಸಿಗರೇಟ್ ಮಾರಾಟ ಮಾಡುವವರು ಸಣ್ಣ ಪುಟ್ಟ ಅಂಗಡಿಗಳು, ಅವರ ಮೇಲೆ ಮತ್ತೊಂದು ರೀತಿಯ ದೌರ್ಜನ್ಯ ಆಗಬಾರದು. ಹಾಗಾಗಿ ಸಾವಿರ ರೂಪಾಯಿ ದಂಡ ಹಾಕಿದ್ದೇವೆ. ಆದರೆ, ಹುಕ್ಕಾ ಬಾರ್ ನಡೆಸುವವರು ಶ್ರೀಮಂತರು. ಅವರಿಗೆ ಬೇಕಾದರೆ ನೊಡೋಣ ಎಂದು ಹೇಳಿದರು.

ಶಾಸಕ ಸುರೇಶ್ ಕುಮಾರ್ ಮಾತನಾಡಿ, ಅಪರೂಪಕ್ಕೆ ಒಳ್ಳೆಯ ಬಿಲ್ ತಂದಿದ್ದಾರೆ ಎಂದು ಹೇಳಿದರು. ಈ ವೇಳೆ ಮಧ್ಯಪ್ರವೇಶ ಮಾಡಿದ ಶಾಸಕ ಶಿವಲಿಂಗೇಗೌಡ, ಹುಕ್ಕಾ ಬಾರ್ ಅಂದ್ರೇನು, ಸ್ವಲ್ಪ ವಿವರ ನೀಡಿ ಎಂದು ಕೇಳಿದರು. ಅದಕ್ಕೆ ಪ್ರತಿಕ್ರಿಯೆ ನೀಡಿದ ಸ್ಪೀಕರ್ ಯು.ಟಿ. ಖಾದರ್, ಗೂಗಲ್ ಮಾಡಿ ಸಿಗುತ್ತದೆ ಎಂದು ಹೇಳಿ ಕೂರಿಸಿದರು.

ಫೆ.26, 27 ರಂದು ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳ: ವಿಕಲಚೇತನರು ಭಾಗವಹಿಸಲು ಅವಕಾಶ

ಬಳ್ಳಾರಿ: ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ವತಿಯಿಂದ ಫೆ.26 ಮತ್ತು 27 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದ್ದು, ಉದ್ಯೋಗವನ್ನು ಬಯಸುವಂತಹ ಬಳ್ಳಾರಿ ಜಿಲ್ಲೆಯ ವಿಕಲಚೇತನರು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಹೆಚ್. ಗೋವಿಂದಪ್ಪ ಅವರು ತಿಳಿಸಿದ್ದಾರೆ.

ಆಸಕ್ತರು https://udyoga.skillconnet.kaushalkar.com/ ಲಿಂಕ್ಗೆ ಭೇಟಿ ನೀಡಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡು ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ಜಿಲ್ಲೆಯ ಎಂಆರ್ಡಬ್ಲ್ಯೂಗಳ ದೂರವಾಣಿ ಸಂಖ್ಯೆ: ಬಳ್ಳಾರಿ, ಕಂಪ್ಲಿ-8880875620, ಕುರುಗೋಡು-9538000887, ಸಿರುಗುಪ್ಪ-9743509698, ಸಂಡೂರು-9632052270 ಅಥವಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ದೂ.08392-267886 ಗೆ ಸಂಪರ್ಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂವಿಧಾನ ಜಾಗೃತಿ ಜಾಥಾ: ಸಂಡೂರು ಪಟ್ಟಣದಲ್ಲಿ ಸಂಚಾರ

ಬಳ್ಳಾರಿ: ಸಂವಿಧಾನ ಜಾಗೃತಿ ಜಾಥಾವು ಸಂಡೂರು ಪಟ್ಟಣದ ವಿವಿಧ ವಾರ್ಡ್ಗಳಲ್ಲಿ ಸಂಚರಿಸಿತು.

ಸಂಡೂರು ಪಟ್ಟಣಕ್ಕೆ ಆಗಮಿಸಿದ ಜಾಥಾವನ್ನು ಕಳಶ ಹಿಡಿದ ಮತ್ತು ಪೂರ್ಣ ಕುಂಭ ಹೊತ್ತ ಮಹಿಳೆಯರು, ಹಲಗೆ ಮತ್ತು ಡೊಳ್ಳು ಕಲಾವಿದರು, ಕಂಸಾಳೆ, ನಂದಿ ಕೋಲು ಕುಣಿತದ ಕಲಾವಿದರು, ವೀರಗಾಸೆ ಕಲಾ ಪ್ರದರ್ಶನ, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು, ಜನಪ್ರತಿನಿಧಿಗಳು, ಪಟ್ಟಣದ ಮುಖಂಡರು ಹಾಗೂ ಸಾರ್ವಜನಿಕರು ಅದ್ದೂರಿಯಾಗಿ ಬರ ಮಾಡಿಕೊಂಡರು.

ಜಾಥಾದಲ್ಲಿ ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಲಾಯಿತು. ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು.

ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ, ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಯಿತು.

ಜಾಥಾವು ತಾಲ್ಲೂಕು ಕಚೇರಿಯಿಂದ ಹೊರಟು, ವಿಜಯಾ ಸರ್ಕಲ್ನ ಸ್ತಬ್ಧಚಿತ್ರದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ರವರ ಪುತ್

ಫೆ.26,27 ರಂದು ಬೃಹತ್ ಉದ್ಯೋಗ ಮೇಳ

ಬೆಳಗಾವಿ: ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಬೆಂಗಳೂರಿನ ಅರಮನೆ ಮೈದಾನದಲ್ಲಿ ಫೆ.26, 27 ರಂದು ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ.

ಮೇಳದಲ್ಲಿ 500ಕ್ಕೂ ಹೆಚ್ಚಿನ ಪ್ರತಿಷ್ಠಿತ ಕಂಪನಿ, ಉದ್ದಿಮೆ, ಉದ್ಯೋಗದಾತ ಸಂಸ್ಥೆಗಳು ಭಾಗವಹಿಸುತ್ತಿವೆ. ಆದ್ದರಿಂದ ಬೆಳಗಾವಿ ಜಿಲ್ಲೆಯಲ್ಲಿನ ವಿಕಲಚೇತನ ಉದ್ಯೋಗಾಕಾಂಕ್ಷಿಗಳು **http://udfyoga.skillconnect.kaushalkar.com** ಲಿಂಕ್‌ನಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು, ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳುವಂತೆ ಬೆಳಗಾವಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಲಸಕ್ಕೆ ಹೋಗು ಎಂದಿದ್ದಕ್ಕೆ ಯುವಕ ಆತ್ಮಹತ್ಯೆಗೆ ಶರಣು

ಶಿವಮೊಗ್ಗ: ಮನೆಯಲ್ಲಿ ಕೆಲಸಕ್ಕೆ ಹೋಗು ಎಂದಿದ್ದಕ್ಕೆ ಯುವಕ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಹಳೆ ಕೋಡಿಹಳ್ಳಿಯಲ್ಲಿ ನಡೆದಿದೆ.

ಸಾಗರ್ (21) ಆತ್ಮಹತ್ಯೆ ಮಾಡಿಕೊಂಡ ಯುವಕ. ಕೆಲಸಕ್ಕೆ ಹೋಗು ಎಂದು ಮನೆಯವರು ಹೇಳಿದ್ದಕ್ಕೆ ಮನನೊಂದು ಯುವಕ ಫೆಬ್ರವರಿ 19ರಂದು ಜ್ಯೂಸ್‌ಗೆ ಇಲಿಪಾಷಾಣ ಬೆರಸಿಕೊಂಡು ಕುಡಿದು ಆತ್ಮಹತ್ಯೆಗೆ ಯತ್ನಿಸಿದ್ದ. ವಿಷಯ ತಿಳಿದ ಕೂಡಲೇ ಯುವಕನ ಪೋಷಕರು ಆತನನ್ನು ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಿದ್ದರು. ಕೊನೆಗೆ ಚಿಕಿತ್ಸೆ ಫಲಕಾರಿಯಾಗದೇ ಯುವಕ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾನೆ.

ಬಾಹುಬಲಿ ಸ್ವಾಮಿಗೆ ಇಂದಿನಿಂದ ಮಹಾ ಮಸ್ತಕಾಭಿಷೇಕ

ಮಂಗಳೂರು: ಇಲ್ಲಿನ ವೇಣೂರು ಬಾಹುಬಲಿ ಸ್ವಾಮಿಗೆ ಗುರುವಾರ ಮಹಾ ಮಸ್ತಕಾಭಿಷೇಕ ನಡೆಯಲಿದೆ. ಮಾ.1ರ ವರೆಗೆ ಈ ಮಹಾಮಸ್ತಕಾಭಿಷೇಕ ಕಾರ್ಯಕ್ರಮ ನಡೆಯಲಿದೆ.

ಮಹಾಮಸ್ತಕಾಭಿಷೇಕದ ಈ 9 ದಿನಗಳಲ್ಲೂ ಸಂಜೆ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಪ್ರತಿ ದಿನ ಸಂಜೆ 5:30ಕ್ಕೆ ಮಹಾಮಸ್ತಕಾಭಿಷೇಕ ಆರಂಭಗೊಳ್ಳಲಿದ್ದು, ಜಲ, ಕಷಾಯ, ಕಲ್ಕಚೂರ್ಣ, ಅರಶಿನ, ಶ್ರೀಗಂಧ, ಚಂದನ, ಅಷ್ಟಗಂಧ, ಹಾಲು, ಎಳನೀರು, ಕೇಸರಿ ದ್ರವ್ಯಗಳಿಂದ ಮಸ್ತಕಾಭಿಷೇಕ ನೆರವೇರಲಿದೆ.

ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರ ಅಧ್ಯಕ್ಷತೆಯಲ್ಲಿ ಮಹಾಮಸ್ತಕಾಭಿಷೇಕ ನಡೆಯಲಿದೆ. ದಿಗಂಬರ ಮುನಿಶ್ರೀಗಳಾದ 108ನೇ ಅಮೋಘಕೀರ್ತಿ ಮಹರಾಜ್ ಮತ್ತು 108ನೇ ಅಮರಕೀರ್ತಿ ಮಹಾರಾಜ್ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಭಾಗವಹಿಸಲಿದ್ದಾರೆ.

1604ರಲ್ಲಿ 35 ಅಡಿ ಎತ್ತರದ ಏಕಶಿಲಾ ಬಾಹುಬಲಿ ಮೂರ್ತಿಯನ್ನು ಅಜಿಲ ಅರಸ ತಿಮ್ಮಣ್ಣ ಪ್ರತಿಷ್ಠಾಪಿಸಿದ್ದರು. ವಿಶ್ವದಲ್ಲಿರುವ ಏಕೈಕ ಮಂದಸ್ಮಿತ ಬಾಹುಬಲಿ ಮೂರ್ತಿ ಇದಾಗಿದೆ. ಪ್ರತೀ 12 ವರ್ಷಗಳಿಗೊಮ್ಮೆ ಮಹಾಮಸ್ತಕಾಭಿಷೇಕ ನಡೆಯುತ್ತದೆ.

ತನ್ನ ಬಿಟ್ಟು ಬೇರೊಬ್ಬನೊಂದಿಗೆ ತಿರುಗುತ್ತಿದ್ದ ಪತ್ನಿಗೆ ನಡುರಸ್ತೆಯಲ್ಲೇ ಮಚ್ಚಿನಿಂದ ಕೊಚ್ಚಿದ ವ್ಯಕ್ತಿ

ಬೆಂಗಳೂರು: ಬೆಂಗಳೂರಿನ ಜೀವನ್ ಭೀಮಾ ನಗರದ ವಿಂಡ್ ಟನಲ್ ರಸ್ತೆಯಲ್ಲಿ ನಡುರಸ್ತೆಯಲ್ಲೇ ಪತ್ನಿಯ ಮೇಲೆ ವ್ಯಕ್ತಿಯೋರ್ವ ಮಾರಣಾಂತಿಕವಾಗಿ ಹಲ್ಲೆ ಮಾಡಿರುವ ಘಟನೆ ನಡೆದಿದೆ.

ತನ್ನಿಂದ ದೂರಾಗಿದ್ದ ಪತ್ನಿ ಮತ್ತೊಬ್ಬನೊಂದಿಗೆ ಹೋಗುವುದನ್ನು ಕಂಡ ಪತಿ ನಡುರಸ್ತೆಯಲ್ಲೇ ಮಚ್ಚಿನಿಂದ ಹಲ್ಲೆಯನ್ನು ನಡೆಸಿದ್ದಾನೆ. ದಾಳಿಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಮಹಿಳೆಯನ್ನು ಸ್ಥಳೀಯರು ಹೆಚ್‌ಎಎಲ್ ನ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಆರೋಪಿ ಶೇಕ್ ಮುಜೀಬ್ ತನ್ನ ಪತ್ನಿ 28 ವರ್ಷದ ನೈಗರ್ ಮೇಲೆ ಹಲ್ಲೆ ನಡೆಸಿದ್ದಾರೆ. ಇವರು ಆರು ವರ್ಷಗಳ ಹಿಂದೆ ಮದುವೆಯಾಗಿದ್ದರು. ಆದರೆ ದಾಂಪತ್ಯದಲ್ಲಿ ಬಿರುಕು ಉಂಟಾಗಿ ಬೇರ್ಪಟ್ಟಿದ್ದರು. ನಂತರ ನೈಗರ್ ಆರು ತಿಂಗಳ ನಂತರ ಮತ್ತೊಬ್ಬ ವ್ಯಕ್ತಿ ಸಲೀಂ ಎಂಬಾತನ ಜತೆ ಸಂಬಂಧ ಹೊಂದಿದ್ದಳು. ನಿನ್ನೆ ಸಂಜೆ ಪತ್ನಿ ನೈಗರ್ ಸಲೀಂ ಜತೆಗೆ ಹೋಗುತ್ತಿರುವುದನ್ನು ಕಂಡ ಶೇಕ್ ಮುಜೀಬ್ ಪತ್ನಿ ಮೇಲೆ ಮಚ್ಚಿನಿಂದ ಹಲ್ಲೆ ಮಾಡಿದ್ದನು.

ಘಟನಾ ಸ್ಥಳಕ್ಕೆ ಜೆ.ಬಿ ನಗರ ಪೊಲೀಸರು ಆಗಮಿಸಿ ಆರೋಪಿ ಶೇಖ್ ಮುಜಿಬ್‌ನನ್ನು ಬಂಧಿಸಿದ್ದಾರೆ. ಮುಜಿಬ್ ವಿರುದ್ಧ ಜೀವನ್ ಭೀಮಾನಗರ ಪೊಲೀಸ್ ಠಾಣೆಯಲ್ಲಿ 307 ಕೇಸ್ ದಾಖಲಾಗಿದೆ.

ಮಹಿಳೆಯರನ್ನು ಗೌರವಿಸುವ ಪ್ರವೃತ್ತಿ ಬೆಳೆಸಿಕೊಳ್ಳಲು ಮಹಿಳಾ ನಾಯಕಿ ಲೀಲಾ ಕರೆ

'ನಾನು ರಾಣಿ ಚನ್ನಮ್ಮ 200ನೇ ವರ್ಷಾಚರಣೆ ಆಚರಣೆ ಕಾರ್ಯಕ್ರಮ

ಬೆಳಗಾವಿ: ಮಹಿಳೆಯರನ್ನು ಗೌರವಿಸುವದರ ಜೊತೆಗೆ ನೋಡುವ ದೃಷ್ಟಿಕೋನಗಳು ಬದಲಾಗಬೇಕಿದೆ ಎಂದು ಮಹಿಳಾ ನಾಯಕಿ ಕೆ. ಲೀಲಾ ಹೇಳಿದರು.

ಜಿಲ್ಲೆಯ ಚನ್ನಮ್ಮನ ಕಿತ್ತೂರಿನ ಕೋಟೆಯ ಆವರಣದಲ್ಲಿ ಮಂಗಳವಾರ ಆಯೋಜಿಸಿದ 'ನಾನು ರಾಣಿ ಚನ್ನಮ್ಮ 200ನೇ ವರ್ಷಾಚರಣೆ ಆಚರಣೆ ಕಾರ್ಯ ಕ್ರಮದಲ್ಲಿ ಅವರು ಮಾತನಾಡಿ, ಕಿತ್ತೂರು ನಾಡಿನ ನೆಲದಲ್ಲಿ ಅಂದು ಕಪ್ಪು ಕಾಣಿಕೆಗೆ ಬ್ರಿಟಿಷರನ್ನು ಪ್ರಶ್ನೆ ಮಾಡಿ ಹೋರಾಟ ಮಾಡಿದವಳು ವೀರರಾಣಿ ಚನ್ನಮ್ಮ ಇಂದು ನಾವು ನಮ್ಮ ತೆರಿಗೆ ಹಣವನ್ನು ನಮಗೆ ನೀಡಿ ಎಂದು ಕೇಳುತ್ತಿದ್ದೇವೆ ಅದನ್ನು ಕೊಡಬೇಕು ಅದು ನಮ್ಮ ಹಕ್ಕು. ಮಹಿಳೆಯರಿಗೆ 50ರಷ್ಟು ಮೀಸಲಾತಿ ನೀಡಬೇಕೆಂದು ಒತ್ತಾಯಿಸಿದರು.

ಕರ್ನಾಟಕ ಮಹಿಳಾ ದೌರ್ಜನ್ಯ ವಿರೋಧಿ ಸಂಘಟನೆಯ ಡಾ. ಎಚ್-ಎಸ್ ಅನುಪಮಾ ಮಾತನಾಡಿ, ಮಹಿಳೆಯರಿಗೆ ಶೇ 50 ರಷ್ಟು ಮಿಸಲಾತಿ ನೀಡಬೇಕು. ಇಲ್ಲವಾದಲ್ಲಿ ಎಲ್ಲಾ ಪಕ್ಷದಲ್ಲಿರುವ ಮಹಿಳಾ ಮುಖಂಡರು ಹೊರ ಬಂದು ಪಕ್ಷ ರಚಿಸಿದರೆ ನೀವೆಲ್ಲಾ ಖರ್ಚಿ ಬಿಟ್ಟು ಇಳಿಯಬೇಕಾಗುತ್ತದೆ ಎಂದು ಎಚ್ಚರಿಸಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಪ್ರಚಾರ "ನಾನು ರಾಣಿ ಚನ್ನಮ್ಮ" ಸಂಬಂಧಿಸಿದ ಗೀತೆಯನ್ನು ಬಿಡುಗಡೆ ಮಾಡಲಾಯಿತು. ಕಿತ್ತೂರು ಕೋಟೆಯಲ್ಲಿ ನೆಡೆದ ಈ ಕಾರ್ಯಕ್ರಮದಲ್ಲಿ ಸುಮಾರು 4 ಸಾವಿರ ಮಹಿಳೆಯರು ಮತ್ತು ಪುರುಷರು ಭಾಗವಹಿಸಿದ್ದು ಈ ಕಾಯಕ್ರಮದಲ್ಲಿ ಕರ್ನಾಟಕ, ದೆಹಲಿ, ಕೇರಳ, ತಮಿಳುನಾಡು, ಆಂದ್ರಪ್ರದೇಶ, ತೆಲಂಗಾಣ, ರಾಜಸ್ಥಾನ್, ಗುಜರಾತ್, ಮಹಾರಾಷ್ಟ್ರ ,ಕಾಶ್ಮೀರ ಬಿಹಾರ, ಗೋವಾ ಮತ್ತು ಪಾಂಡಿಚೇರಿ , ಉತ್ತರಪ್ರದೇಶ ಮುಂತಾದ ರಾಜ್ಯಗಳಿಂದ ಬಂದಂತ ಪ್ರತಿನಿಧಿಗಳು ಭಾಗಿಯಾಗಿದ್ದರು.

ಇದೇ ವೇಳೆ ರೋಹಿಣಿ ಬಾಬಾ ಸಾಹೇಬ ಪಾಟೀಲ್ಲ, ಶೈಲಜಾ ಹಿರೇಮಠ, ಶಬ್ನಂ ಅಸ್ಮಿ, ಯಾಣಿ ರಾಜ, ವಿಶ್ವೇಶ್ವರಿ ಹಿರೇಮಠ್, ರತ್ನ ಶೆಟ್ಟರ, ಪ್ರಿಯಾಂಕಾ ದಾಮೋನಿ ,ಆಶಾ ಸೈಯದ್ ಗಿರಿಜಾ, ಶೆಟ್ಟಿ ಕರುಣಿಸ ,ವಿಜಯ ಧಡೂತಿ ,ವಿದ್ಯಾ ದೇಸಾಯಿ,ಗಿರಿಜಾ ಶೇಕ್ಕಿ, ಖೈರುನ್ನಿಸಾ ಹಾಗೂ ವಿವಿಧ ಕ್ಷೇತ್ರಗಳಿಂದ ಸಂಘಟಿಕರು ಕಾರ್ಯಕರ್ತರು ಭಾಗಿಯಾಗಿದ್ದರು. ಕಾರ್ಯಕ್ರಮವನ್ನು ಅಖಿಲಾ ವಿದ್ಯಾಸಂದ್ರ ಮಹಿಳಾ ಮಾನವ ಹಕ್ಕುಗಳ ಹೋರಾಟಗಾರ್ತಿ ಹಾಗೂ ಕರ್ನಾಟಕ ರಾಜ್ಯ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟ ಮತ್ತು ಸಾಮಾಜಿಕ ಕಾರ್ಯಕರ್ತೆ, ದೆಹಲಿಯ ಅನ್ಹದನ ಲೀನಾ ದವೇರು ನಿರೂಪಿಸಿದರು.

ಗಮನ ಸೆಳೆದ ಮೆರವಣಿಗೆ: ಇದಕ್ಕೂ ಮುನ್ನ ಹೆದ್ದಾರಿ ಪಕ್ಕದ ರಾಣಿ ಚನ್ನಮ್ಮಾಜಿಯ ವರ್ತುಳದಿಂದ ಮೆರವಣಿಗೆ ಹಾಗೂ ಬಿತ್ತಿ ಚಿತ್ರಗಳೊಂದಿಗೆ ಘೋಷಗಳನ್ನು ಕೂಗುತ್ತಾ ಐತಿಹಾಸಿಕ ಕೋಟೆಯವರೆಗೆ ಮೆರವಣಿಗೆ ಸಾಗಿ ಬಂದಿತು. ನಂತರ ವೀರ ಮಹಿಳೆಯರ ಬಿತ್ತಿ ಚಿತ್ರಗಳ ಪ್ರದರ್ಶನ ಸಾಹಿತಿ ಮಾಲತಿ ಪಟ್ಟಣಶೆಟ್ಟಿ ಹಾಗೂ ಸಮಾಜಿಕ ಹೋರಾಟಗಾರ ಎಸ್.ಆರ್. ಹಿರೇಮಠ ಉದ್ಘಾಟಿಸಿದರು.

ಫೆ.22 ರಂದು ಶಿವಗಂಗಾ ಆರತಿ ವಿಶೇಷ ಪೂಜಾ ಕಾರ್ಯಕ್ರಮ; ಸಾರ್ವಜನಿಕರು ಪಾಲ್ಗೊಳ್ಳಲು ಮನವಿ

ಬಳ್ಳಾರಿ: ನಗರದ ಶ್ರೀ ಕೋಟೆ ಮಲ್ಲೇಶ್ವರ ಸ್ವಾಮಿಯ ಉತ್ಸವವು ಮಾ.09 ರ ವರೆಗೆ ಜರಗುತ್ತಿದ್ದು, ಫೆ.24 ರಂದು ಬ್ರಹ್ಮರಥೋತ್ಸವು ನಡೆಯಲಿದೆ. ಇದರ ಅಂಗವಾಗಿ ಫೆ.22 ರಂದು ಶ್ರೀ ಕೋಟೆ ಮಲ್ಲೇಶ್ವರ ಸ್ವಾಮಿ ಮತ್ತು ಪಾರ್ವತಿ ದೇವಿಯ ಕಲ್ಯಾಣೋತ್ಸವ ಹಾಗೂ ವಿಶೇಷವಾಗಿ ಮೊದಲ ಬಾರಿಗೆ ಶಿವಗಂಗಾ ಆರತಿ ವಿಶೇಷ ಪೂಜಾ ಕೈಂಕರ್ಯಗಳ ಕಾರ್ಯಕ್ರಮವು ಸಂಜೆ 7 ಗಂಟೆಗೆ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು, ಸಾರ್ವಜನಿಕರು ಭಾಗವಹಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಮಹಾನಗರಪಾಲಿಕೆಯ ಮಹಾಪೌರರು ಮತ್ತು ಚುನಾಯಿತ ಪ್ರತಿನಿಧಿಗಳು ಹಾಗೂ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸುವರು ಎಂದು ಶ್ರೀ ಮಲ್ಲೇಶ್ವರ ಸ್ವಾಮಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ ಅವರು ತಿಳಿಸಿದ್ದಾರೆ.

ಬಿಟ್‌ಕಾಯಿನ್ ಪ್ರಕರಣ: ಐಪಿಎಸ್ ಅಧಿಕಾರಿ ಸಂದೀಪ್ ಪಾಟೀಲ್‌ಗೆ ನೋಟಿಸ್ ಜಾರಿ

ಬೆಂಗಳೂರು: ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಪೊಲೀಸರೇ ಹಗರಣದ ದಿಕ್ಕು ತಪ್ಪಿಸಿದ್ದಲ್ಲದೇ ಬಿಟ್‌ಕಾಯಿನ್ ಹಗರಣದಲ್ಲಿ ಭಾಗಿಯಾಗಿದ್ದರು ಎಂಬ ಆರೋಪ ಕೇಳಿ ಬಂದಿತ್ತು. ಕಾಂಗ್ರೆಸ್ ಸರ್ಕಾರ ಬಿಟ್‌ಕಾಯಿನ್ ತನಿಖೆಯ ಹೊಣೆಯನ್ನು ಎಸ್‌ಐಟಿ ವಹಿಸಿದ್ದು, ಇದೀಗ ಬಿಟ್‌ಕಾಯಿನ್ ತನಿಖೆ ಹಿರಿಯ ಐಪಿಎಸ್ ಅಧಿಕಾರಿಯ ವಿಚಾರಣೆ ಹಂತಕ್ಕೆ ತಲುಪಿದೆ.

ಬಿಟ್‌ಕಾಯಿನ್ ಪ್ರಕರಣದ ಪ್ರಮುಖ ಆರೋಪಿ ಶ್ರೀಕಿ ಅಲಿಯಾಸ್ ಶ್ರೀಕೃಷ್ಣ. ಈತನನ್ನು ಸಿಸಿಬಿ ಅಧಿಕಾರಿಗಳು ಪದೇ ಪದೇ ವಿಚಾರಣೆ ನಡೆಸಿದ್ದಾರೆ. ಎಸ್‌ಐಟಿ ಸಹ ತನಿಖೆಯ ಜವಾಬ್ದಾರಿ ವಹಿಸಿದ ಮೇಲೆ ಶ್ರೀಕಿಯ ವಿಚಾರಣೆಯನ್ನು ಮಾಡಿತ್ತು. ಇದೀಗ ಬಿಟ್‌ಕಾಯಿನ್ ಹಗರಣ ತನಿಖೆಗೆ ಹಾಜರಾಗುವಂತೆ ಹಿರಿಯ ಐಪಿಎಸ್ ಅಧಿಕಾರಿ ಸಂದೀಪ್ ಪಾಟೀಲ್‌ಗೆ ಎಸ್‌ಐಟಿ ನೋಟೀಸ್ ನೀಡಿದೆ.

ಇನ್ನೂ ಬಿಟ್‌ಕಾಯಿನ್ ಹಗರಣದ ತನಿಖೆ ಎಸ್‌ಐಟಿ ಕೈಗೊಳ್ಳುತ್ತಿದ್ದಂತೆ ಇನ್ಸ್‌ಪೆಕ್ಟರ್ ಪ್ರಶಾಂತ್ ಬಾಬು, ಸಂತೋಷ್‌ರನ್ನು ವಿಚಾರಣೆ ಮಾಡಿ ಬಂಧಿಸಲಾಗಿತ್ತು. ಈ ಹಗರಣ ನಡೆದ ವೇಳೆ ಸಿಸಿಬಿಯ ಮುಖ್ಯಸ್ಥರಾಗಿದ್ದ ಹಿರಿಯ ಐಪಿಎಸ್ ಅಧಿಕಾರಿ ಸಂದೀಪ್ ಪಾಟೀಲ್‌ಗೂ ಹಲವು ಮಾಹಿತಿಗಳು ನೀಡಲಾಗಿತ್ತು ಎನ್ನಲಾಗಿದೆ.

ಇದೇ ವಿಚಾರಕ್ಕೆ ಸಂಬಂಧಿಸಿದಂತೆ ಐಪಿಎಸ್ ಅಧಿಕಾರಿ ಸಂದೀಪ್ ಪಾಟೀಲ್ ಅವರ ಹೇಳಿಕೆ ಪಡೆಯುವ ಉದ್ದೇಶದಿಂದ ನೋಟೀಸ್ ನೀಡಲಾಗಿದೆ. ಬಿಟ್‌ಕಾಯಿನ್‌ನ ಸತ್ಯಾಂಶ ಏನು ಅನ್ನೋದು ಹೊರಬರಬೇಕಿದೆ.

ಗಂಡು ಮಗುವಿಗೆ ಜನ್ಮ ಕೊಟ್ಟ ಕೊಹ್ಲಿ-ಅನುಷ್ಕಾ ದಂಪತಿ

ಮುಂಬೈ: ಟೀಮ್ ಇಂಡಿಯಾದ ಮಾಜಿ ಕ್ಯಾಪ್ಟನ್ ವಿರಾಟ್ ಕೊಹ್ಲಿ ಪತ್ನಿ ಹಾಗೂ ಬಾಲಿವುಡ್ ನಟಿ ಅನುಷ್ಕಾ ಶರ್ಮಾ ಗಂಡು ಮಗುವಿಗೆ ಜನ್ಮ ನೀಡಿದ್ದಾರೆ. 4 ದಿನಗಳ ಹಿಂದೆ ಫೆಬ್ರವರಿ 15ನೇ ತಾರೀಕು ಲಂಡನ್ನಿನ ಪ್ರತಿಷ್ಠತ ಆಸ್ಪತ್ರೆಯಲ್ಲೇ ಅನುಷ್ಕಾ ಶರ್ಮಾ ಗಂಡು ಮಗುವಿಗೆ ತಾಯಿ ಆಗಿದ್ದಾರೆ ಎಂದು ತಿಳಿದು ಬಂದಿದೆ.

ಇನ್ನು, ತಂದೆಯಾಗುತ್ತಿದ್ದಂತೆ ಕೊಹ್ಲಿ ಇನ್‌ಸ್ಟಾ ಸೇರಿದಂತೆ ತಮ್ಮ ಸೋಶಿಯಲ್ ಮೀಡಿಯಾ ಖಾತೆಗಳಲ್ಲಿ ಭಾವನಾತ್ಮಕ ಸಂದೇಶ ಬರೆದಿದ್ದಾರೆ. ವಿರಾಟ್ ಕೊಹ್ಲಿ ಸಂತಸದ ಕ್ಷಣಕ್ಕೆ ಟೀಮ್ ಇಂಡಿಯಾ ಸಹ ಆಟಗಾರರು ಶುಭ ಹಾರೈಸಿದ್ದಾರೆ. ಇನ್ನೂ ಕೊಹ್ಲಿ ಮಗನಿಗೆ ಅಕಾಯ್ ಎಂದು ನಾಮಕರಣ ಮಾಡಲಾಗಿದೆ. ಕೊಹ್ಲಿ ಪೋಸ್ಟ್‌ಲ್ಲೇನಿದೆ..? ನಮಗೆ ಮುದ್ದಾದ ಗಂಡು ಮಗು ಜನಿಸಿದೆ ಎಂಬ ಸುದ್ದಿ ನಿಮ್ಮೊಟ್ಟಿಗೆ ಹಂಚಿಕೊಳ್ಳಲು ಖುಷಿ ಆಗುತ್ತಿದೆ. ನಮ್ಮ ಮುದ್ದಿನ ಮಗಳು ವಮಿಕಾಗೆ ಅಕಾಯ್ ತಮ್ಮನಾಗಿ ಬಂದಿದ್ದಾನೆ. ನಿಮ್ಮೆಲ್ಲರ ಪ್ರೀತಿ, ಹಾರೈಕೆ ಮತ್ತು ಪ್ರಾರ್ಥನೆಗೆ ಧನ್ಯವಾದಗಳು. ತಾಯಿ ಅನುಷ್ಕಾ ಹಾಗೂ ಮಗು ಆರೋಗ್ಯದಿಂದ ಇದ್ದಾರೆ. ಈ ಸಲವೂ ನಮ್ಮ ಖಾಸಗಿತನವನ್ನು ಗೌರವಿಸುತ್ತೀರಿ ಎಂದು ಭಾವಿಸುತ್ತೇನೆ ಎಂದು ಬರೆದುಕೊಂಡಿದ್ದಾರೆ.

ಗೌರವ ಧನ ಹೆಚ್ಚಳಕ್ಕೆ ಅಂಗನವಾಡಿ ಕಾರ್ಯಕರ್ತೆಯರ ಒತ್ತಾಯ

ಬೆಳಗಾವಿ: ಗೌರವ ಧನ ಹೆಚ್ಚಿಸುವಂತೆ ಒತ್ತಾಯಿಸಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಬುಧವಾರ ಸಚಿವ ಸತೀಶ ಜಾರಕಿಹೊಳಿ ಅವರ ಕಚೇರಿಯಲ್ಲಿ ಕೆಪಿಸಿಸಿ ಸದಸ್ಯ ಮಲಗೌಡ ಪಾಟೀಲ ಅವರ ಮುಖಾಂತರ ಸಚಿವ ಸತೀಶ ಜಾರಕಿಹೊಳಿ ಅವರಿಗೆ ಮನವಿ ರವಾನಿಸಿದರು.

ಸಿಎಂ ಸಿದ್ದರಾಮಯ್ಯನವರು ಪ್ರಸಕ್ತ 2024-25ನೇ ಸಾಲಿನ ಬಜೆಟ್ ಮಂಡಿಸಿದ್ದು, ಉತ್ತಮವಾದ ಆಯುವ್ಯಯ ಪತ್ರ ಮಂಡಿಸಿದ್ದಾರೆ. ಆದರೆ ಕಳೆದ ಚುನಾವಣೆಯ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿಯವರು ಘೋಷಿಸಿದಂತೆ 6ನೇ ಗ್ಯಾರೆಂಟಿಯಾಗಿ ಅಂಗನವಾಡಿ ಕಾರ್ಯಕರ್ತೆಯ ಗೌರವ ಧನ 15 ಸಾವಿರ ಹಾಗೂ ಸಹಾಯಕಿಯರ ಗೌರವ ಧನವಾಗಿ 10 ಸಾವಿರಕ್ಕೆ ಹೆಚ್ಚಿಸುವ ಹಾಗೂ ನಿವೃತ್ತರಿಗೆ 3 ಲಕ್ಷ ಇಡುಗಂಟು ನೀಡುವ ಭರವಸೆ ನೀಡಿದ್ದರು. ಇದು ಇನ್ನುವರೆಗೂ ಜಾರಿ ಮಾಡಿಲ್ಲ. ಕೂಡಲೇ ಮಾನ್ಯ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರು ಸಿಎಂ ಸಿದ್ದರಾಮಯ್ಯನವರ ಗಮನ ಸೆಳೆದು ನಮ್ಮ ಬೇಡಿಕೆ ಈಡೇರಿಸುವಂತೆ ಮಾಡಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಈ ವೇಳೆ ಸುಜಾತಾ ಬೆಳಗಾಂಕರ, ಬಾಗವ್ವಾ ಹೊಲೆನ್ನವರ, ರೇಖಾ ಕುಂಬರಗಿ, ಮಹಾದೇವಿ ಪಾಟೀಲ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರು ಇದ್ದರು.

ಸಭೆಗೆ ಗೈರಾದರೆ ಶಿಸ್ತು ಕ್ರಮ: ಜಿಪಂ ಸಿಇಒ ರಾಹುಲ್ ಶಿಂಧೆ

ಬೆಳಗಾವಿ: ಮುಂಬರುವ ಕೆಡಿಪಿ ಸಭೆಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸಮಗ್ರ ಮಾಹಿತಿಯೊಂದಿಗೆ ಕಡ್ಡಾಯವಾಗಿ ಹಾಜರಾಗಬೇಕು. ಸಭೆಗೆ ಗೈರು ಹಾಜರಾದರೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಎಚ್ಚರಿಕೆ ನೀಡಿದರು.

ನಗರದ ಹಳೆ ಜಿಪಂ ಸಭಾಭವನದಲ್ಲಿ (ಫೆ.21) ಬುಧವಾರ ಜಿಲ್ಲೆಯ ಕೆಡಿಪಿ ಸಭೆಯ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಬರಗಾಲ ಎದುರಾಗಿದ್ದು, ಕೃಷಿ, ತೋಟಗಾರಿಕ

ಯುವಜನತೆಗೆ ಕಾನೂನಿನ ಅರಿವು ಅಗತ್ಯ : ಹಿರಿಯ ನ್ಯಾಯವಾದಿ ಎಸ್.ಬಿ.ಶೇಖ ಅಭಿಮತ

ಬಿ.ವ್ಹಿ.ಬೆಲ್ಲದ ಕಾನೂನು ಮಹಾವಿದ್ಯಾಲಯದಲ್ಲಿ ಗಮನಸೆಳೆದ 'ಅಧಿನಿಯಮ್‌ದರ್ಶನ್' ಕಾನೂನು ಪ್ರದರ್ಶನ

ಬೆಳಗಾವಿ: 'ಇಂದಿನ ಯುವ ವಿದ್ಯಾರ್ಥಿಗಳಿಗೆ ಭಾರತೀಯ ಸಂವಿಧಾನ ಹಾಗೂ ಕಾನೂನಿನ ಅರಿವು ಮೂಡಿಸುವುದುಅಗತ್ಯವಾಗಿದೆ. ಪ್ರತಿಯೊಬ್ಬ ಭಾರತೀಯನೂ ಕಾನೂನು ತಿಳಿಯುವುದು ಅಷ್ಟೇ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಸಮಗ್ರಚಿತ್ರ ಹಾಗೂ ಬರೆಹದ ಮೂಲಕ ಭಾರತೀಯ ಕಾನೂನುಶಾಸ್ತ್ರವನ ನ್ನಿಕಟ್ಟಿಕೊಟ್ಟಿರುವ ಬಿ.ವ್ಹಿ.ಬೆಲ್ಲದ ಕಾನೂನು ವಿದ್ಯಾರ್ಥಿಗಳ ಈ ಕಾರ್ಯ ಮೌಲಿಕವೆನಿಸಿದೆ' ಎಂದುಹಿರಿಯ ನ್ಯಾಯವಾದಿಎಸ್.ಬಿ.ಶೇಖ್ ಹೇಳಿದರು.

ಅವರುಕೆ.ಎಲ್.ಇ. ಸಂಸ್ಥೆಯ ಬಿ.ವಿ.ಬೆಲ್ಲದ ಕಾನೂನು ಮಹಾವಿದ್ಯಾಲಯವುಬುಧವಾರ21 ರಂದುಬೆಲ್ಲದ ಕಾನೂನುಕಾಲೇಜಿನ ಸೆಮಿನಾರ್ ಹಾಲ್‌ನಲ್ಲಿ ಆಯೋಜಿಸಿದ್ದ "ಅಧಿನಿಯಮದರ್ಶನ್ – ನ್ಯಾಯಅನಾವರಣ: ಕಾನೂನು ಪರಿಶೋಧನೆ" ಕಾನೂನು ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು. ಮುಂದುವರೆದು, 'ಈ ಪ್ರದರ್ಶನದಲ್ಲಿ ಭಾರತದಲ್ಲಿಜಿಲ್ಲಾ ನ್ಯಾಯಾಲಯ, ಹೈಕೋರ್ಟ್, ಸುಪ್ರೀಂಕೋರ್ಟ್ ಪರಿಕಲ್ಪನೆಗಳನ್ನು ಚಿತ್ರವಾಗಿ ತಿಳಿಸಿಕೊಡಲಾಗಿದೆ. ಸಂವಿಧಾನ ಹಲವಾರು ಅಧಿನಿಯಮಗಳು, ಮಹತ್ವದ ಐತಿಹಾಸಿಕ ತೀರ್ಪುಗಳು, ನ್ಯಾಯಾಧೀಶರಕುರಿತುಸಮಗ್ರದರ್ಶನವನ್ನು ಬಿಂಬಿಸುವ ಕಾನೂನು ಪ್ರದರ್ಶನವುಆ–ಕರ್ಷಕವಾಗಿದೆ'ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಮಾರಂಭದಕಾಲೇಜಿನ ಸ್ಥಾನಿಕ ಆಡಳಿತ ಮಂಡಳಿಯ ಅಧ್ಯಕ್ಷರಾದಆರ್. ಬಿ.ಬೆಲ್ಲದ್ ಅವರುಮಾತನಾಡಿ'ಭಾರತೀಯ ಸಂ ಕಾನೂನು ಶಾಸ್ತ್ರ ಬೆಳೆದುಬಂದ ದಾ–ರಿಯನ್ನು ಹಲವಾರು ನೆಲೆಗಳಲ್ಲಿ ಅತ್ಯಂತಆ–ಕರ್ಷಕವಾಗಿ ಈ ಪ್ರದರ್ಶನದಲ್ಲಿ ಸಂಂ–ಯೋಜಿಸಲಾಗಿದೆ. ವಿದ್ಯಾರ್ಥಿಗಳ ರಚನಾತ್ಮಕ ಹಾಗೂ ಕ್ರಿಯಾತ್ಮಕದೃಷ್ಟಿಕೋನಕ್ಕೆ ಹಿಡಿದಕನ್ನಡಿಯಾಗಿದೆ. ಯುವ ವಿದ್ಯಾರ್ಥಿಗಳು ಕಾನೂನು ಶಾಸ್ತ್ರವನ್ನುಅ–ರಿಯುವಲ್ಲಿ ಈ ಪ್ರದರ್ಶನ ಸಹಕಾ–ರಿಯಾಗಿದೆ'ಎಂದುತಿಳಿಸಿದರು.

ಪ್ರಾಚಾರ್ಯ ಡಾ.ಬಿ.ಜಯಸಿಂಹ ಅವರು ಮಾತನಾಡಿ'ಜನತೆಗೆ ಹಾಗೂ ಯುವ ವಿದ್ಯಾರ್ಥಿಗಳಿಗೆ ಕಾನೂನಿನ ಅರಿವು ಮೂಡಿಸುವುದು ನಮ್ಮಗುರಿಯಾಗಿತ್ತು. ಅಂತೆಯೆಭಾರತೀಯ ಸಂವಿಧಾನದರಚನೆ, ಅದರ ವಿನ್ಯಾಸವನ್ನು, ದೇಶದಮಹತ್ವದ ಪ್ರಕರಣಗಳ ವಿವರಣೆ ಸಹಿತ ಮಾದ–ರಿಗಳನ್ನು ಪ್ರಸ್ತುತ ಪಡಿಸಲಾಗಿದೆ. ಕಳೆದ ಆರು ತಿಂಗಳವರೆಗೆ ವಿದ್ಯಾರ್ಥಿಗಳು ದನಿವ–ರಿಯದೆ ಪ್ರದರ್ಶನಕ್ಕಾಗಿ ಸಿದ್ಧ ಮಾಡಿಕೊಂಡು ರೂಪಿಸಿದ್ದಾರೆ. ನಗರದಯುವ ವಿದ್ಯಾರ್ಥಿಗಳು ಪ್ರದರ್ಶನದ ಲಾಭ ಪಡೆದುಕೊಳ್ಳಬೇಕೆಂದು' ಹೇಳಿದರು.

ಪ್ರದರ್ಶನದ ಸಂದರ್ಭದಲ್ಲಿ ಭಾರತೀಯ ಸುಪ್ರೀಂಕೋರ್ಟ್ ಸೇರಿದಂತೆ ವಿವಿಧ ರಾಜ್ಯಗಳಲ್ಲಿರುವ ಹೈಕೋರ್ಟ್‌ಗಳ ಮಾದ–ರಿಗಳು, ಭಾರತದ ಐತಿಹಾಸಿಕ ಪ್ರಕರಣಗಳು, ದೇಶದಲ್ಲಿ ಹಣದ ಮಸೂದೆಯನ್ನು–ಅಂಗೀಕರಿಸುವ ಪ್ರಕ್ರಿಯೆಗಳು, ಮಹಿಳೆಯರ ಲೈಂಗಿಕ ದೌರ್ಜನ್ಯತಡೆಗಟ್ಟುವ ಅಂಶಗಳು, ರಾಷ್ಟ್ರೀಯ ತುರ್ತುಪರಿಸ್ಥಿತ ಮಸೂದೆ 352, ರಾಮ ಜನ್ಮಭೂಮಿ ಪ್ರಕರಣ, ಕೇಶವಾನಂದ ಪ್ರಕರಣ, ಭಾರತ ಉಚ್ಚನ್ಯಾಯಾಲಯದ ವ್ಯಾಪ್ತಿ, ಸಂವಿಧಾನದ ಪೂರ್ವ ಪೀಠಿಕೆ ವಿಶ್ಲೇಷಣೆ,ಜಿಲ್ಲಾ ನ್ಯಾಯಾಲಯ–ಉಚ್ಚನ್ಯಾಯಾಲಯ–ಸರ್ವೋಚ್ಚ ನ್ಯಾಯಾಲಯಗಳ ಮಾದ–ರಿಗಳು, ಸ್ವಾತಂತ್ರ್ಯ ಭಾರತದ ಅನೇಕ ಪ್ರಖ್ಯಾತ ನ್ಯಾಯಾಧೀಶರು ಮತ್ತು ಮಹಿಳಾ ನ್ಯಾಯಾಧೀಶರ ಸಮಗ್ರ ವಿವರಗಳು, ಮಾಕ್ ಪಾರ್ಲಿಮೆಂಟ್, ಪ್ರಸ್ತುತ ಕಾನೂನು ಕ್ಷೇತ್ರದಲ್ಲಿನ ಬದಲಾವಣೆಗಳುಕುರಿತು ಅತ್ಯಂತ ವ್ಯವಸ್ಥಿತವಾಗಿ ಪ್ರದರ್ಶಿಸಲಾಗಿತ್ತು. ಸಹಾಯಕ ಪ್ರಾಧ್ಯಾಪಕಿರಾಜಶ್ರೀ ಪಾಟೀಲ ಪ್ರದರ್ಶನವನ್ನು ಸಂಯೋಜಿಸಿದ್ದರು.

ಡಾ.ಉಮಾ ಹಿರೇಮಠ, ಡಾ.ಜ್ಯೋತಿ ಹಿರೇಮಠ, ಪ್ರೊ.ಸವಿತಾ ಪಟ್ಟಣಶೆಟ್ಟಿ, ಪ್ರೊ.ಎಂ.ಎಸ್.ಆಲಪ್ಪನವರ, ಡಾ. ಎಸ್.ಸಿ.ಪಾಲ್ಕೊಂಡ್, ಡಾ.ಅಶ್ವಿನಿ ಹಿರೇಮಠ, ಡಾ. ಸುಪ್ರಿಯಾ ಸ್ವಾಮಿ, ಪ್ರೊ.ಸಂಜೀವಕೋಶಾವರ ಉಪಸ್ಥಿತ–ರಿದ್ದರು. ಮಹಾವಿದ್ಯಾಲಯದ ಕಾನೂನು ವಿದ್ಯಾರ್ಥಿಗಳು ಬಹುಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಈ ಪ್ರದರ್ಶನವು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆಜರುಗಿ–ತು.

ಇದೇ ಸಂದರ್ಭದಲ್ಲಿಇಂದು 95ನೇ ವಯಸ್ಸಿನಲ್ಲಿ ನಿಧನಹೊಂದಿದಭಾರತದ ಸುಪ್ರೀಂಕೋರ್ಟ್‌ಹಿರಿಯ ನ್ಯಾಯವಾದಿ, ನ್ಯಾಯಶಾಸ್ತ್ರಜ್ಞ ಹಾಗೂ ಪದ್ಮವಿಭೂಷಣ ಪಾಲಿ ನಾರಿಮನ್ ನಿಧನಕ್ಕೆ ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ಸೆಬಿಗೆ ಡಿಆರ್‌ಹೆಚ್‌ಪಿ ಸಲ್ಲಿಸಿದ ಲೆ ಟ್ರಾವೆನ್ಯೂಸ್ ಟೆಕ್ನಾಲಜಿ

ಹುಬ್ಬಳ್ಳಿ: ಲೆ ಟ್ರಾವೆನ್ಯೂಸ್ ಟೆಕ್ನಾಲಜಿ ಲಿಮಿಟೆಡ್ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಹೆಚ್‌ಪಿ) ನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಗೆ ಸಲ್ಲಿಸಿದೆ.

ಕಂಪನಿಯು ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಗಳ ಮೂಲಕ ಹಣವನ್ನು ಸಂಗ್ರಹಿಸಲು ಯೋಜಿಸಿದೆ (ಪ್ರತಿಯೊಂದು ಮುಖಬೆಲೆ ರೂ 1). ಈ ಸಂಚಿಕೆ ಕೊಡುಗೆಯು ರೂ 120 ಕೋಟಿ ವರೆಗೆ ಒಟ್ಟುಗೂಡಿದ ಈಕ್ವಿಟಿ ಷೇರುಗಳ ಹೊಸ ಸಂಚಿಕೆ ಒಳಗೊಂಡಿದೆ ಮತ್ತು ಷೇರುದಾರರನ್ನು ಮಾರಾಟ ಮಾಡುವ ಮೂಲಕ 66,677,674 ಇಕ್ವಿಟಿ ಷೇರಿಗೆ ಮಾರಾಟಕ್ಕೆ ಕೊಡುಗೆ

ಲೆ ಟ್ರಾವೆನ್ಯೂಸ್‌ಟೆಕ್ನಾಲಜಿ ಲಿಮಿಟೆಡ್‌ಬಹು–ಅಪ್ಲಿಕೇಶನ್ ತಂತ್ರ ಹೊಂದಿರುವ ಬ್ರ್ಯಾಂಡ್ ಇಕ್ಸಿಗೋ ಮೂಲಕ ಕಾರ್ಯನಿರ್ವಹಿಸುತ್ತದೆ. ಇಕ್ಸಿಗೊ ಬಹು ಬ್ರಾಂಡ್ ಹೊಂದಿದೆ ಮತ್ತು ನಿರ್ವಹಿಸುತ್ತದೆ – ಇಕ್ಸಿಗೊ ಫ್ಲೈಟ್‌ಗಳು, ರೈಲುಗಳು, ಕನ್ಫರ್ಮ್‌ಟಿಕೆಟ್ ಮತ್ತು ಅಭಿಬಸ್ ಪ್ರತಿಯೊಂದೂ ತನ್ನದೇ ಅಪ್ಲಿಕೇಶನ್ ಹೊಂದಿದೆ.

ಕಂಪನಿಯು ತಂತ್ರಜ್ಞಾನ ಕಂಪನಿಯಾಗಿದ್ದು, ರೈಲು, ವಿಮಾನ, ಬಸ್‌ಗಳು ಮತ್ತು ಹೋಟೆಲ್‌ಗಳಲ್ಲಿ ತಮ್ಮ ಪ್ರವಾಸಗಳನ್ನು ಯೋಜಿಸಲು, ಬುಕ್ ಮಾಡಲು ಮತ್ತು ನಿರ್ವಹಿಸಲು ಭಾರತೀಯ ಪ್ರಯಾಣಿಕರಿಗೆ ಅಧಿಕಾರ ನೀಡುವುದರ ಮೇಲೆ ಕೇಂದ್ರೀಕರಿಸಿದೆ. ಕಂಪನಿಯು OTA ರೈಲು ಮಾರುಕಟ್ಟೆಯಲ್ಲಿ ಅತಿದೊಡ್ಡ ಭಾರತೀಯ ರೈಲು ಟಿಕೆಟ್ ವಿತರಕವಾಗಿದೆ ಮತ್ತು ಇದು

ಮಾರ್ಚ್ 31, 2023 ರಂತೆ OTA ಗಳಲ್ಲಿ ರೈಲು ಬುಕಿಂಗ್‌ಗೆ ಸಂಬಂಧಿಸಿದಂತೆ ಸುಮಾರು 51% ನಷ್ಟು ಅತಿದೊಡ್ಡ ಮಾರುಕಟ್ಟೆ ಪಾಲನ್ನು ಹೊಂದಿದೆ. ಕಂಪನಿಯು ಹೊಸ ಸಂಚಿಕೆಯಿಂದ ಬರುವ ನಿವ್ವಳ ಆದಾಯವನ್ನು ಈ ಮುಂದಿನಂತೆ ಬಳಸಿಕೊಳ್ಳಲು ಪ್ರಸ್ತಾಪಿಸುತ್ತದೆ –

1. ನಮ್ಮ ಕಂಪನಿಯ ಭಾಗ–ಹಣಕಾಸಿನ ಕಾರ್ಯ ಬಂಡವಾಳದ ಅವಶ್ಯಕತೆಗಳು.
2. ಕ್ಲೌಡ್ ಮೂಲಸೌಕರ್ಯ ಮತ್ತು ತಂತ್ರಜ್ಞಾನದಲ್ಲಿ ಹೂಡಿಕೆಗಳು.
3. ಗುರುತಿಸಲಾಗದ ಸ್ವಾಧೀನಗಳು ಮತ್ತು ಇತರ ಕಾರ್ಯತಂತ್ರದ ಉಪಕ್ರಮಗಳು ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳ ಮೂಲಕ ಅಜೈವಿಕ ಬೆಳವಣಿಗೆಗೆ ಧನಸಹಾಯ.

ಈ ಮಾರಾಟದ ಕೊಡುಗೆಯು SAI ಈ ಪಾರ್ಟ್‌ನರ್ಸ್ ಇಂಡಿಯಾ ೫ಗಿ ಲಿಮಿಟೆಡ್‌ನಿಂದ 19,437,465 ಇಕ್ವಿಟಿ ಷೇರುಗಳು, ಈ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಬಿಎಸ್‌ಇ ಲಿಮಿಟೆಡ್ (ಬಿಎಸ್‌ಇ) ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ (ಎನ್‌ಎಸ್‌ಇ) ನಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ. ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್, ದಾಮ್‌ಕ್ಯಾಪಿಟಲ್ ಅಡ್ವೈಸರ್ಸ್ ಲಿಮಿಟೆಡ್ ಮತ್ತು ಜೆಎಂ ಫೈನಾನ್ಶಿಯಲ್ ಲಿಮಿಟೆಡ್ ಈ ಆರಂಭಿಕ ಸಾರ್ವಜನಿಕ ಕೊಡುಗೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿವೆ.

ಸಂವಿಧಾನ ಜಾಗೃತಿ ಜಾಥಾಕ್ಕೆ ಅದ್ದೂರಿ ಸ್ವಾಗತ; ಅಂಬೇಡ್ಕರ್‌ರ ಬದುಕು ಬರಹ ಅರಿತುಕೊಳ್ಳಬೇಕು

ಕೆಂಭಾವಿ: ಸಂವಿಧಾನದ ಆಶೋತ್ತರಗಳನ್ನು ಪ್ರತಿಯೊಬ್ಬರು ಅರ್ಥೈಸಿಕೊಂಡು ಸಂವಿಧಾನಕ್ಕೆ ಬದ್ಧವಾಗಿ ನಡೆದುಕೊಳ್ಳುವುದು ಭಾರತೀಯರ ಆದ್ಯ ಕರ್ತವ್ಯವಾಗಿದೆ ಎಂದು ಕಲಬುರ್ಗಿ ಕಾಲೇಜಿನ ಡೀನ್ ಪ್ರೊ ವಿಜಯಕುಮಾರ ಸಾಲಿಮನಿ ಹೇಳಿದರು.

ಪಟ್ಟಣದ ಪುರಸಭೆ ಆವರಣದಲ್ಲಿ ಜಿಲ್ಲಾಡಳಿತ, ತಾಲೂಕು ಮತ್ತು ಸ್ಥಳೀಯಾಡಳಿತ ಸಹಯೋಗದೊಂದಿಗೆ ಮಂಗಳವಾರ ಸಂಜೆ ಹಮ್ಮಿಕೊಂಡಿದ್ದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಭಾರತೀಯ ಮಹಿಳೆಯರಿಗೆ ಹಿಂದೂ ಬಿಲ್ ಕೋಡ್ ಜಾರಿಗೆ ತಂದು ಅವರಲ್ಲಿ ಆತ್ಮವಿಶ್ವಾಸ ತುಂಬಿ ಸ್ವಾಭಿಮಾನದ ಬದುಕು ಕಲ್ಪಿಸಿ ಕೊಟ್ಟ ಮೊದಲ ಭಾರತೀಯ ಬಾಬಾಸಾಹೇಬ ಅಂಬೇಡ್ಕರ್ ಎಂದವರು, ಪ್ರೀತಿ, ಕರುಣೆ, ಮೈತ್ರಿ ಈ ದೇಶದಲ್ಲಿ ಜಾ–ರಿಯಾಗಬೇಕು ಎನ್ನುತ್ತಾ, ಇಂದಿನ ಯುವ ಜನಾಂಗ ಭಾರತ ರತ್ನ ಬಾಬಾಸಾಹೇಬ ಅಂಬೇಡ್ಕರ್ ಬದುಕು ಬರಹ ಅರಿತುಕೊಳ್ಳುವ ಮೂಲಕ ಕಡ್ಡಾಯ ಶಿಕ್ಷಣ ಪಡೆಯಬೇಕು ಎಂದವರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ತಾಲೂಕು ದಂಡಾಧಿಕಾರಿ ವಿಜಯಕುಮಾರ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ, ನ್ಯಾಯದ ಪರಿಕಲ್ಪನೆಯನ್ನು

ಅರಿತು ನಡೆಯಬೇಕು, ಹಕ್ಕು ಮತ್ತು ಕರ್ತವ್ಯಗಳು ಒಂದು ನಾಣ್ಯದ ಎರಡು ಮುಖಗಳಿದ್ದಂತೆ ಎಂದರು. ಶಿಕ್ಷಕಿ ನೀಲಮ್ಮ ಮಲ್ಲೇ ಪ್ರಾಸ್ತಾವಿಕ ಮಾತನಾಡಿದರು.

ಇದೇ ವೇಳೆ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಬಸವರಾಜ ಸಜ್ಜನ್, ಸಮಾಜ ಕಲ್ಯಾಣಾಧಿಕಾರಿ ಶೃತಿ ಎಂ, ಪುರಸಭೆ ಮ್ಯಾನೇಜರ್ ರೇಣುಕಾ, ಪಿಎಸ್‌ಐ ರಾಜಶೇಖರ ರಾಠೋಡ, ಲಾಲ್ಲಪ್ಪ ಹೊಸ್ಮನಿ, ಮಡಿವಾಳಪ್ಪ ಕಿರದಳ್ಳಿ, ಶರಣಪ್ಪ ವಾಡಿ, ಜುಮ್ಮಣ್ಣ ಕಟ್ಟಿಮನಿ, ಸುರೇಶ ಮಾಳಳ್ಳಿಕರ್, ಸೇರಿದಂತೆ ಪುರಸಭೆ ಸದಸ್ಯರು, ದಲಿತ ಸಂಘಟನೆಯ ಪದಾಧಿಕಾರಿಗಳು, ವಿವಿಧ ಶಾಲೆಗಳ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಖ್ಯಾತ ಹಿಂದುಸ್ತಾನಿ ಗಾಯಕ ಬಸವರಾಜ ಬಂಟನೂರ ಹಾಗೂ ಯಮನೇಶ ಯಾಳಗಿ ಇವರಿಂದ ಸಂಗೀತ ಕಾರ್ಯಕ್ರಮ ಮೂಡಿ ಬಂತು ಡಾ ಯಂಕನಗೌಡ ಪಾಟೀಲ್ ನಿರೂಪಿಸಿದರು, ಸಿದ್ರಾಮಯ್ಯ ಇಂಡಿ ಸ್ವಾಗತಿಸಿದರು, ಬಸವರಾಜ ಮಾಳಳ್ಳಿಕರ್ ವಂದಿಸಿದರು.

ಇದಕ್ಕೂ ಮುನ್ನ ಸಂವಿಧಾನ ಜಾಗೃತಿ ಜಾಥಾ ರಥಕ್ಕೆ ಭೋಗೆಶ್ವರ ದೇವಸ್ಥಾನದಿಂದ ಕುಂಭ, ಕಳಸ ಹೊತ್ತು ವಿವಿಧ ವಾದ್ಯ ವೃಂದದೊಂದಿಗೆ ಮಾಲಾರ್ಪಣೆ ಮಾಡುವ ಮೂಲಕ ಅದ್ದೂರಿ ಸ್ವಾಗತ ನೀಡಲಾಯಿತು ನಂತರ ಸಂವಿಧಾನ ಜಾಗೃತಿ ಜಾಥಾದ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳು ವಿವಿಧ ವೇಷಭೂಷಣಗಳು ನೃತ್ಯ ರೂಪಕಗಳು ಕಲಾ ತಂಡಗಳ ಜೊತೆ ಪುರಸಭೆ ಆವರಣ ತಲುಪಿ ಸಂವಿಧಾನದ ಪೀಠಿಕೆ ಪ್ರತಿಜ್ಞಾವಿಧಿ ಬೋಧಿಸಿಲಾಯಿತು.

ಕೆಡಿಪಿ ಸಮಿತಿ ನಾಮನಿರ್ದೇಶನ ಸದಸ್ಯರಾಗಿ ಖೋತ ನೇಮಕ

ಹುಕ್ಕೇರಿ: ತಾಲೂಕು ಕೆಡಿಪಿ ಸಮಿತಿ ನಾಮನಿರ್ದೇಶನ ಸದಸ್ಯರನ್ನಾಗಿ ಶಿರಹಟ್ಟಿ ಬಿ.ಕೆ. ಗ್ರಾಮದ ಸಿದ್ಧರಾಮ ಖೋತ ಅವರನ್ನು ನೇಮಕ ಮಾಡಲಾಗಿದೆ.

ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಮಾಜಿ ಸಚಿವರಾದ ಎ.ಬಿ.ಪಾಟೀಲ, ಶಶಿಕಾಂತ ನಾಯಿಕ ಮಾರ್ಗದರ್ಶನದಲ್ಲಿ ಖೋತ ಅವರನ್ನು ನೇಮಕ ಮಾಡಲಾಗಿದೆ.

ಕೇಂದ್ರ ಕಾರಾಗೃಹ, ಬೆಳಗಾವಿಯಲ್ಲಿ ಸಾಕ್ಷರತಾ ಪ್ರಮಾಣ ಪತ್ರಗಳ ವಿತರಣಾ ಕಾರ್ಯಕ್ರಮ ಆಯೋಜನೆ

ಬೆಳಗಾವಿ: ದಿನಾಂಕ 20–02–2024 ರಂದು ಕೇಂದ್ರ ಕಾರಾಗೃಹ ಬೆಳಗಾವಿಯಲ್ಲಿ "ಕಲಿಕೆಯಿಂದ ಬದಲಾವಣೆ" ಶೀರ್ಷಿಕೆಯಡಿ ಆಯೋಜಿಸಲಾದ ಎರಡನೇಯ ಹಂತದ ಸಾಕ್ಷರತಾ ಕಾರ್ಯಕ್ರಮದಲ್ಲಿ ಉತ್ತೀರ್ಣರಾದ ಹಾಗೂ ಬೋಧಕರಾಗಿ ಕಾರ್ಯ ನಿರ್ವಹಿಸಿದ ಬಂದಿಗಳಿಗೆ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮ ಜರುಗಿತು. ಸದರಿ ಕಾರ್ಯಕ್ರಮವು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಹಾಗೂ ಸಮನ್ವಯಾಧಿಕಾರಿಗಳು, ಜಿಲ್ಲಾ ವಯಸ್ಕರ ಶಿಕ್ಷಣ ಕಾರ್ಯಾಲಯ ಹಾಗೂ ಕೇಂದ್ರ ಕಾರಾಗೃಹ, ಬೆಳಗಾವಿ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿತ್ತು. ಮುಖ್ಯ ಅತಿಥಿಗಳಾಗಿ ಹಿರಿಯ ಉಪನ್ಯಾಸಕರಾದ ಶ್ರೀ. ಬಸವರಾಜ ಕುಸುಗಲ್ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳಾದ ಶ್ರೀ. ಈರಯ್ಯ ಹಿರೇಮಠ ಆಗಮಿಸಿದ್ದರು. ಅಧ್ಯಕ್ಷತೆಯನ್ನು ಕಾರಾಗೃಹದ ಮುಖ್ಯ

ಅಧೀಕ್ಷಕರಾದ ಶ್ರೀ ಕೃಷ್ಣಕುಮಾರ್ ವಹಿಸಿದ್ದರು.

ಸಸಿಗೆ ನಿರೂಣಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಲಾಯಿತು. ಶ್ರೀ. ಕೃಷ್ಣಕುಮಾರ್, ಮುಖ್ಯ ಅಧೀಕ್ಷಕರು ಮಾತನಾಡಿ, ಕಾರಾಗೃಹದಲ್ಲಿರುವ ಅನಕ್ಷರಸ್ಥ ಬಂದಿಗಳನ್ನು ಗುರುತಿಸಿ ಅವ–ರಿಗೆ ಶಿಕ್ಷಣವನ್ನು ನೀಡಿ ಸಾಕ್ಷರರನ್ನಾಗಿಸುವ ನಿಮಿತ್ಯ "ಕಲಿಕೆಯಿಂದ ಬದಲಾವಣೆ" ಶೀರ್ಷಿಕೆಯಡಿ ಸಾಕ್ಷರತಾ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಕಾರಣ ತಾವೆಲ್ಲ ನಿವಾಸಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು, ವಿದ್ಯೆಗೆ ಯಾವುದೇ ವಯಸ್ಸಿನ ಇತಿಮಿತಿಗಳಿಲ್ಲ ಹಾಗೂ ವಿದ್ಯೆಯನ್ನು ಯಾರಿಂದಲೂ ಕದಿಯಲಾಗದು. ಅಜ್ಞಾನವು ನಮ್ಮಲ್ಲಿ ಭಯ ಉಂಟು ಮಾಡಿದರೆ, ಭಯ ನಮ್ಮಲ್ಲಿ ಅಜ್ಞಾನವನ್ನುಂಟು ಮಾಡುತ್ತದೆ. ಇವೆರಡನ್ನೂ ಹೋಗಲಾಡಿಸುವ ಏಕೈಕ ಅಸ್ತ್ರವೆಂದರೆ ವಿದ್ಯೆ, ಶಿಕ್ಷಣ ಎಂದು ಹೇಳಿದರು.

ಶ್ರೀ. ಬಸವರಾಜ ಕುಸುಗಲ್ ಮಾತನಾಡಿ, ಶಿಕ್ಷಣದ ಮಹತ್ವವನ್ನು ವಿವರಿಸಿದರು. ಕಾರ್ಯಕ್ರಮದಂತೆ ಶೀರ್ಷಿಕೆಯಂತೆ ತಾವೆಲ್ಲ ಕಲಿಕೆಯಿಂದ ಬದಲಾಗಬೇಕು. ಜೀವನದಲ್ಲಿ ಒಮ್ಮೆ ಮಾಡಿದ ತಪ್ಪನ್ನು ಮತ್ತೇ ಮಾಡದೇ, ಬಿಡುಗಡೆ ನಂತರ ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ಬಾಳಬೇಕು ಎಂದು ಹೇಳಿದರು.

ಶ್ರೀ ಈರಯ್ಯ ಹಿರೇಮಠರವರು ಮಾತನಾಡಿ, ಶಿಕ್ಷಣ ಇಲಾಖೆಯ ವತಿಯಿಂದ ಸಾಕ್ಷರತಾ ಕಾರ್ಯಕ್ರಮದಲ್ಲಿ ಭಾಗವಹಿಸುವ ಎಲ್ಲಾ ಕಲಿಕಾರ್ಥಿಗಳಿಗೆ ಉಚಿತವಾಗಿ ಕಲಿಕಾ ಸಾಮಗ್ರಿಗಳನ್ನು ಪೂರೈಸಲಾಗಿದ್ದು, ತಾವೆಲ್ಲ ನಿಷ್ಠೆಯಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪರೀಕ್ಷೆಯಲ್ಲಿ ತೇರ್ಗಡೆಯಾಗಿರುತ್ತೀರಿ. ಕಾರಾಗೃಹದ ಶಿಕ್ಷಕರಾದ ಶ್ರೀ. ಎಸ್.ಎಸ್. ಯಾದಗುಡೆ ಇವರ ಮಾರ್ಗದರ್ಶನದಲ್ಲಿ ವಿದ್ಯಾವಂತ ಬಂದಿಗಳಿಂದ ಅನಕ್ಷರಸ್ಥ ಬಂದಿಗಳಿಗೆ ಓದು, ಬರಹ ಕಲಿಸುವ ಕಾರ್ಯ ಸ್ತುತ್ಯಾರ್ಹ ಎಂದು ಹೇಳಿದರು. ಬಿಡುಗಡೆ ಹೊಂದಿದ ನಂತರ ತಾವೆಲ್ಲ ಸಮಾಜದಲ್ಲಿ ಇತರರಿಗೆ ಹಾಗೂ ತಮ್ಮ ಕುಟುಂಬದವರಿಗೆ